# ಬೆಳಗಾವಿ ವರದಿ

ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ್, ಬಿ, ಗುಡಗೇನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

VOL.04 ISSUE. 296 ₹4, SATURDAY, 20 JANUARY 2024 NEWSBELAGAVI@GMAIL.COM 9900332089 RNI. KARKAN/2020/79084 REG.NO G-2/PMG/KA/NK/BM/139/2024-26




## ಅಯೋಧ್ಯೆ ಮೇಲೆ ಉಗ್ರರ ಕರಿನೆರಳು

### 3 ಅನುಮಾನಾಸ್ಪದ ವ್ಯಕ್ತಿಗಳ ಬಂಧನ

ಲಖನೌ: ಅಯೋಧ್ಯೆ ಶ್ರೀರಾಮ ಮಂದಿರ ಉದ್ಘಾಟನೆಗೆ ಸಿದ್ಧತೆಗಳು ಭರದಿಂದ ಸಾಗಿದ್ದು, ಈ ನಡುವಲ್ಲೇ ಭಯೋತ್ಪಾದಕ ನಿಗ್ರಹ ದಳ ಮೂವರು ಅನುಮಾನಾಸ್ಪದ ವ್ಯಕ್ತಿಗಳನ್ನು ಬಂಧನಕ್ಕೊಳಪಡಿಸಿದೆ ಎಂದು ಶುಕ್ರವಾರ ತಿಳಿದುಬಂದಿದೆ.

ಉತ್ತರ ಪ್ರದೇಶದ ವಿಶೇಷ ಪೊಲೀಸ್ ಮಹಾನಿರ್ದೇಶಕ (ಕಾನೂನು ಮತ್ತು ಸುವ್ಯವಸ್ಥೆ) ಪ್ರಶಾಂತ್ ಕುಮಾರ್ ಅವರು ಮಾತನಾಡಿ, ಅಯೋಧ್ಯೆ ಜಿಲ್ಲೆಯಲ್ಲಿ ರಾಜ್ಯ ಭಯೋತ್ಪಾದನಾ ನಿಗ್ರಹ ದಳವು ಮೂವರು ಅನುಮಾನಾಸ್ಪದ ವ್ಯಕ್ತಿಗಳನ್ನು ವಶಕ್ಕೆ ಪಡೆದಿದೆ ಎಂದು ಮಾಹಿತಿ ನೀಡಿದ್ದಾರೆ.

ರಾಜ್ಯ ಸರ್ಕಾರ ಮತ್ತು ಪೊಲೀಸ್ ಪ್ರಧಾನ ಕಚೇರಿಯ ಸೂಚನೆಯ ಮೇರೆಗೆ ನಡೆಸುತ್ತಿರುವ ತಪಾಸಣೆ ಅಭಿಯಾನದ ಭಾಗವಾಗಿ, ಅಯೋಧ್ಯೆ ಜಿಲ್ಲೆಯ ಯುಪಿ-ಎಟಿಎಸ್‌ನಿಂದ ಮೂವರು ಅನುಮಾನಾಸ್ಪದ ವ್ಯಕ್ತಿಗಳನ್ನು ಬಂಧಿಸಲಾಗಿದೆ. ಈ ಶಂಕಿತರನ್ನು ವಿಚಾರಣೆ ನಡೆಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

ಇಲ್ಲಿಯವರೆಗೆ ಯಾವುದೇ ಭಯೋತ್ಪಾದಕ ಸಂಘಟನೆಯೊಂದಿಗೆ ಅವರ ಸಂಪರ್ಕ ಬೆಳಕಿಗೆ ಬಂದಿಲ್ಲ ಎನ್ನಲಾಗಿದೆ.

ಶ್ರೀರಾಮ ಮಂದಿರ ಉದ್ಘಾಟನೆಗೆ ಕ್ಷಣಗಣನೆ ಆರಂಭವಾಗಿದ್ದು, ಈ ವೇಳೆ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಉತ್ತರಪ್ರದೇಶ ಸರ್ಕಾರ ಭದ್ರತೆಯನ್ನು ಹೆಚ್ಚಿಸಿದೆ. ಡ್ರೋಣ್ ಗಳ ಮೂಲಕ ಕಣ್ಗಾವಲು ಹೆಚ್ಚಿಸಿದ್ದು, ನಗರದಲ್ಲಿ ಭದ್ರತೆಯನ್ನು ಬಿಗಿಗೊಳಿಸಿದೆ.

## ಭಾರತದ ನಾವಿನ್ಯತಾ ಸೂಚ್ಯಂಕದಲ್ಲಿ ಕರ್ನಾಟಕಕ್ಕೆ ಮೊದಲ ಸ್ಥಾನ: ಸಿಎಂ

ಬೆಂಗಳೂರು: ಕರ್ನಾಟಕ ವಿಶ್ವದಲ್ಲಿಯೇ 4ನೇ ಅತಿದೊಡ್ಡ ತಂತ್ರಜ್ಞಾನ ಕ್ಲಸ್ಟರ್ ಆಗಿದ್ದು, ಭಾರತದ ನಾವಿನ್ಯತಾ ಸೂಚ್ಯಂಕದಲ್ಲಿ ಮೊದಲ ಸ್ಥಾನದಲ್ಲಿದೆ ಹಾಗೂ ದೇಶದ ಒಟ್ಟಾರೆ ರಫ್ತಿನಲ್ಲಿಯೂ ರಾಜ್ಯ ಮುಂಚೂಣಿಯಲ್ಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಶುಕ್ರವಾರ ಹೇಳಿದರು.

ಬೋಯಿಂಗ್ ಇಂಡಿಯಾ ಇಂಜಿನಿಯರಿಂಗ್ ಮತ್ತು ಟೆಕ್ನಾಲಜಿ ಸೆಂಟರ್ ಕ್ಯಾಂಪಸ್ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಸಿಎಂ, ಈ ಸಂಸ್ಥೆಯು, ತಂತ್ರಜ್ಞಾನದ ವಲಯದಲ್ಲಿ ಮುಂಚೂಣಿಯಲ್ಲಿರುವ ಕರ್ನಾಟಕದ ಮುಕುಟಕ್ಕೆ ಹೊಸದೊಂದು ಗರಿ ಸೇರ್ಪಡೆಯಾದಂತಾಗಿದೆ ಎಂದರು.

ಫಾರ್ಚೂನ್ 500 ಕಂಪೆನಿಗಳಲ್ಲಿ 400 ಕ್ಕೂ ಹೆಚ್ಚು ಕಂಪೆನಿಗಳ ನೆಲೆಯಾಗಿರುವ ನಮ್ಮ ರಾಜ್ಯವು, ಸಂಶೋಧನೆ ಮತ್ತು ಅಭಿವೃದ್ಧಿ, ನವೀಕರಿಸಬಹುದಾದ ಇಂಧನ ಕ್ಷೇತ್ರಗಳಲ್ಲಿ ಮೊದಲ ಸ್ಥಾನದಲ್ಲಿರುವುದಲ್ಲದೆ, ಸ್ಟಾರ್ಟಪ್ ರಾಜಧಾನಿ ಎಂಬ ಕೀರ್ತಿಗೂ ಭಾಜನವಾಗಿದೆ ಎಂದು ಸಿದ್ದರಾಮಯ್ಯ ಹೇಳಿದರು.




ಪ್ರತಿಭಾನ್ವಿತ ಉದ್ಯೋಗಿಗಳು ಹಾಗೂ ಕೌಶಲಯುಕ್ತ ಮಾನವ ಸಂಪನ್ಮೂಲ ಹೇರಳವಾಗಿರುವ ಕರ್ನಾಟಕವು ಸಹಜವಾಗಿಯೇ ತಂತ್ರಜ್ಞಾನ ಹಾಗೂ ಜ್ಞಾನಾಧಾರಿತ ಉದ್ಯಮಗಳ ಮೊದಲ ಆಯ್ಕೆಯಾಗಿದೆ.

ಈ ಎಲ್ಲ ಕಾರಣಗಳಿಂದಾಗಿ ಕರ್ನಾಟಕವು ಹೂಡಿಕೆದಾರರ ನೆಚ್ಚಿನ ತಾಣವಾಗಿದೆ. ಹೂಡಿಕೆದಾರ ಸ್ನೇಹಿ ವಾತಾವರಣ ನಿರ್ಮಿಸಲು ನಮ್ಮ ಸರ್ಕಾರ ಹೊಂದಿರುವ ಬದ್ಧತೆಯನ್ನು ಪುನರುಚ್ಚರಿಸಬಯಸುತ್ತೇನೆ. ಈ ನಿಟ್ಟಿನಲ್ಲಿ ವಿವಿಧ ವಲಯಗಳಿಗೆ ನಿರ್ದಿಷ್ಟ ನೀತಿ ಹಾಗೂ ಕೈಗಾರಿಕಾ ಸ್ನೇಹಿ ನೀತಿಗಳನ್ನು ರಾಜ್ಯ ಸರ್ಕಾರವು ಜಾರಿಗೊಳಿಸಿದೆ ಎಂದರು.

ಬೋಯಿಂಗ್ ಇಂಡಿಯಾದ ಎಂಜಿನಿಯರಿಂಗ್ ಮತ್ತು ತಂತ್ರಜ್ಞಾನ ಕೇಂದ್ರದ ಆವರಣದ ಈ ಉದ್ಘಾಟನಾ ಸಮಾರಂಭವು ಜಾಗತಿಕ ಮಟ್ಟದಲ್ಲಿ ವಿಮಾನಯಾನ ವಲಯದ ಅಭಿವೃದ್ಧಿಗೆ ಉತ್ತಮ ಕೊಡುಗೆ ನೀಡುವ ಆಶಯಕ್ಕೆ ಮತ್ತಷ್ಟು ಪುಷ್ಟಿ ನೀಡುವಂತಿದೆ.ಬೋಯಿಂಗ್ ಸಂಸ್ಥೆಯು ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಸಮೀಪದ ಈ ಪ್ರದೇಶವನ್ನು ಆಯ್ಕೆ ಮಾಡಿರುವುದು ಅತ್ಯಂತ ಸಂತೋಷ ನೀಡಿದೆ. ಈ ಭಾಗವು ರಾಜ್ಯದ ಕೈಗಾರಿಕಾ ಅಭಿವೃದ್ಧಿಯಲ್ಲಿ ಹೊಸ ಹೊಸ ಸಾಧ್ಯತೆಗಳನ್ನು ಹುಟ್ಟುಹಾಕಲು ಮುನ್ನುಡಿ ಬರೆದಿದೆ ಎಂದರು.

## ರಾಮಮಂದಿರ ಪ್ರಾಣಪ್ರತಿಷ್ಠಾಪನೆಯನ್ನು ದೀಪ ಬೆಳಗಿ ದೀಪಾವಳಿಯಂತೆ ಸಂಭ್ರಮಿಸಿ: ಪ್ರಧಾನಿ



ನವದೆಹಲಿ: ಅಯೋಧ್ಯೆಯಲ್ಲಿ ಜ.22 ರಂದು ನಡೆಯಲಿರುವ ರಾಮ ಮಂದಿರ ಪ್ರಾಣಪ್ರತಿಷ್ಠಾಪನೆಯ ಕಾರ್ಯಕ್ರಮವನ್ನು ದೀಪಾವಳಿ ಮಾದರಿ ಸಂಭ್ರಮಿಸಿ ದೀಪ ಬೆಳಗಿ ಎಂದು ಪ್ರಧಾನಿ ಮೋದಿ ಸಚಿವ ಸಂಪುಟ ಸಹೋದ್ಯೋಗಿಗಳಿಗೆ ಕರೆ ನೀಡಿದ್ದಾರೆ.

ರಾಮಮಂದಿರ ಕಾರ್ಯಕ್ರಮದ ಹಿನ್ನೆಲೆಯಲ್ಲಿ ಮನೆಗಳಲ್ಲಿ ದೀಪ ಬೆಳಗಿ, ಬಡವರಿಗೆ ಅಗತ್ಯ ನೆರವು ನೀಡಿ ಎಂದು ಮೋದಿ ಸಂಪುಟ ಸಹೋದ್ಯೋಗಿಗಳಿಗೆ ಹೇಳಿದ್ದಾರೆ.

ತಮ್ಮ ತಮ್ಮ ರಾಜ್ಯಗಳಿಂದ ಭಕ್ತಾದಿಗಳೊಂದಿಗೆ ಜ.22 ರ ನಂತರ ರಾಮ ಮಂದಿರಕ್ಕೆ ಭೇಟಿ ನೀಡುವಂತೆ ಮೋದಿ ಸಚಿವರಿಗೆ ಸಲಹೆ ನೀಡಿದ್ದಾರೆ ಎಂದು ತಿಳಿದುಬಂದಿದೆ.

ಜ.22 ರಂದು ಅಯೋಧ್ಯೆಗೆ ಭೇಟಿ ನೀಡುವ ಭಕ್ತಾದಿಗಳಿಗೆ ಬಿಜೆಪಿ ತನ್ನ ಕಾರ್ಯಕರ್ತರ ಮೂಲಕ ಅಗತ್ಯವಿರುವ ವ್ಯವಸ್ಥೆ ಮಾಡುತ್ತಿದೆ.

## ರಾಮಮಂದಿರ ನಿರ್ಮಾಣಕ್ಕೆ 2 ಕೋಟಿ ರೂ. ಸಂಗ್ರಹಿಸಿ ಕೊಟ್ಟೆ

### ನನಗೆ ಆಹ್ವಾನ ಕೊಟ್ಟಿಲ್ಲ, ನಾನು ಹೋಗಲ್ಲ: ಜಗದೀಶ್ ಶೆಟ್ಟರ್



ಕಲಬುರಗಿ: ರಾಮ ಮಂದಿರ ವಿಚಾರವಾಗಿ ಯಾರೂ ರಾಜಕೀಯ ಮಾಡಬಾರದು ಎಂದು ಹೇಳಿರುವ ಕಾಂಗ್ರೆಸ್ ಒಐಅ ಜಗದೀಶ್ ಶೆಟ್ಟರ್ ಅವರು, ಮಂದಿರ ನಿರ್ಮಾಣಕ್ಕಾಗಿ ನಿಧಿ ಸಂಗ್ರಹ ಮಾಡುವಾಗ 2 ಕೋಟಿ ರೂಪಾಯಿ ಸಂಗ್ರಹ ಕೊಟ್ಟಿದ್ದೆ. ಆದರೆ ನನಗೆ ಆಹ್ವಾನ ಬಂದಿಲ್ಲ. ಹೀಗಾಗಿ ನಾನು ಪ್ರಾಣ ಪ್ರತಿಷ್ಠಾಪನೆ ಸಮಾರಂಭಕ್ಕೆ ಹೋಗುವುದಿಲ್ಲ ಎಂದು ಹೇಳಿದ್ದಾರೆ.

ಕಲಬುರಗಿಯಲ್ಲಿ ಮಾತನಾಡಿದ ಜಗದೀಶ್ ಶೆಟ್ಟರ್, ಅಯೋಧ್ಯೆಯಲ್ಲಿ ರಾಮ ಮಂದಿರ ನಿರ್ಮಾಣ ಆಗಿರುವುದು ಬಹಳ ಖುಷಿ ತಂದಿದೆ. ಆದರೆ ಜನವರಿ 22ರಂದು ನಡೆಯಲಿರುವ ಪ್ರಾಣ ಪ್ರತಿಷ್ಠಾಪನೆಯ ಕಾರ್ಯಕ್ರಮಕ್ಕೆ ನನಗೆ ಆಹ್ವಾನ ಬಂದಿಲ್ಲ. ಹೀಗಾಗಿ ನಾನು ಅಂದು ಅಯೋಧ್ಯೆಗೆ ಹೋಗುವುದಿಲ್ಲ ಎಂದು ಹೇಳಿದರು. ನಾನು ರಾಮ ಭಕ್ತ. ರಾಮಮಂದಿರ ನಿರ್ಮಾಣಕ್ಕೆ ಹಣ ಸಂಗ್ರಹಿಸಲು ಹೇಳಿದಾಗ 2 ಕೋಟಿ ರೂಪಾಯಿ ಸಂಗ್ರಹಿಸಿ ಕೊಟ್ಟಿದ್ದೆ. ಆದರೆ ನನಗೆ ಆಹ್ವಾನ ಕೊಟ್ಟಿಲ್ಲ. ಹೀಗಾಗಿ ಜನವರಿ 22ರ ನಂತರ ಅಯೋಧ್ಯೆಗೆ ತೆರಳಿ ಶ್ರೀರಾಮನ ದರ್ಶನ ಪಡೆಯುತ್ತೇನೆ ಎಂದು ಹೇಳಿದರು. ರಾಮ ಮಂದಿರ ಅನ್ನುವುದು ಧಾರ್ಮಿಕತೆ, ಧರ್ಮದ ಸಂಕೇತ, ಧರ್ಮ ಜಾಗೃತಿ ಮಾಡಲು, ದೇಶವನ್ನು ಒಂದು ಮಾಡಲು ಇರುವಂಥದ್ದು, ಹೀಗಾಗಿ ರಾಮ ಮಂದಿರದ ವಿಚಾರದಲ್ಲಿ ರಾಜಕಾರಣ ಮಾಡಬಾರದು. ರಾಜಕಾರಣದಲ್ಲಿ ಧರ್ಮ ಇರಬೇಕು, ಧರ್ಮದಲ್ಲಿ ರಾಜಕಾರಣ ಬರಬಾರದು. ಆಹ್ವಾನ ಬಂದಿರುವವರು ಅಯೋಧ್ಯೆಗೆ ಹೋಗುವುದು ಬಿಡುವುದು ಅವರವರ ಇಷ್ಟ. ಆದರೆ ನನಗೆ ವೈಯಕ್ತಿಕವಾಗಿ ಆಹ್ವಾನ ಬಂದಿಲ್ಲ ಎಂದು ಹೇಳಿದರು. ಕಾಂಗ್ರೆಸ್ ಹಿಂದೂ ವಿರೋಧಿ ಅಲ್ಲ, ಹಿಂದೂ ವಿರೋಧಿ ಇದ್ದರೆ ರಾಜ್ಯದಲ್ಲಿ 135 ಸ್ಥಾನ ಹೇಗೆ ಬರುತ್ತಿತ್ತು? ಬಿಜೆಪಿಯಿಂದ ನನ್ನನ್ನು ಯಾರೂ ಸಂಪರ್ಕ ಮಾಡಿಲ್ಲ, ನಾನು ವಾಪಸ್ ಬಿಜೆಪಿಗೆ ಹೋಗುವ ಪ್ರಶ್ನೆಯೆ ಇಲ್ಲ ಎಂದು ಜಗದೀಶ್ ಶೆಟ್ಟರ್ ಹೇಳಿದರು.

## ಲೋಕಸಭೆಗೂ ಮುನ್ನ ಕಾಂಗ್ರೆಸ್ ಗೆ ದೊಡ್ಡ ಹೊಡೆತ

ಅಹಮದಾಬಾದ್: ಮುಂಬರುವ ಲೋಕಸಭೆ ಚುನಾವಣೆಗೂ ಮುನ್ನ ಗುಜರಾತ್‌ನ ಹಿರಿಯ ಕಾಂಗ್ರೆಸ್ ಶಾಸಕ ಸಿ.ಜೆ ಚಾವ್ಡಾ ಅವರು ವಿಧಾನಸಭೆಯ ಸದಸ್ಯತ್ವಕ್ಕೆ ರಾಜೀನಾಮೆ ನೀಡಿದ್ದು, ಸದನದಲ್ಲಿ ವಿರೋಧ ಪಕ್ಷದ ಬಲ 15ಕ್ಕೆ ಇಳಿದಿದೆ.

2022ರ ಗುಜರಾತ್ ವಿಧಾನಸಭಾ ಚುನಾವಣೆಯಲ್ಲಿ ಮೆಹ್ಸಾನಾ ಜಿಲ್ಲೆಯ ವಿಜಾಪುರದಿಂದ ಚಾವ್ಡಾ ಗೆದ್ದು ಬಂದಿದ್ದರು. ಆ ಚುನಾವಣೆಯಲ್ಲಿ ಭಾರತೀಯ ಜನತಾ ಪಕ್ಷ (ಬಿಜೆಪಿ) ಭರ್ಜರಿ ಗೆಲುವು ಸಾಧಿಸಿತ್ತು.

ಮೂರು ಬಾರಿ ಶಾಸಕರಾಗಿರುವ ಅವರು ಬೆಳಗ್ಗೆ ಗಾಂಧಿನಗರದಲ್ಲಿ ಸ್ಪೀಕರ್ ಶಂಕರ್ ಚೌಧರಿ ಅವರಿಗೆ ರಾಜೀನಾಮೆ ಸಲ್ಲಿಸಿದ್ದಾರೆ ಎಂದು ರಾಜ್ಯ ವಿಧಾನಸಭೆಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಚಾವ್ಡಾ ಅವರು 2002ರಲ್ಲಿ ಗಾಂಧಿನಗರ ಕ್ಷೇತ್ರದಿಂದ ಮೊದಲ ಬಾರಿಗೆ ವಿಧಾನಸಭೆಗೆ ಆಯ್ಕೆಯಾದರು. ಅವರು 2012 ರಲ್ಲಿ ಗಾಂಧಿನಗರ ಉತ್ತರ ಕ್ಷೇತ್ರದಿಂದ



ಆಯ್ಕೆಯಾದರು. 2022ರವರೆಗೆ ವಿರೋಧ ಪಕ್ಷದ ಮುಖ್ಯ ಸಚೇತಕರಾಗಿದ್ದರು.

2022ರಲ್ಲಿ ರಾಜ್ಯದ 182 ಸದಸ್ಯರ ವಿಧಾನಸಭೆಗೆ ಚುನಾಯಿತರಾದ 17 ಕಾಂಗ್ರೆಸ್ ಶಾಸಕರಲ್ಲಿ ಚಾವ್ಡಾ ಸಹ ಒಬ್ಬರಾಗಿದ್ದರು. ಇದಕ್ಕೂ ಮುನ್ನ ಆನಂದ್ ಜಿಲ್ಲೆಯ ಖಂಭತ್‌ನ ಕಾಂಗ್ರೆಸ್ ಶಾಸಕ ಚಿರಾಗ್ ಪಟೇಲ್ ಕೂಡ ವಿಧಾನಸಭೆ ಸದಸ್ಯತ್ವಕ್ಕೆ ರಾಜೀನಾಮೆ ನೀಡಿದ್ದರು.

ಈ ಇಬ್ಬರು ಕಾಂಗ್ರೆಸ್ ಶಾಸಕರು ರಾಜೀನಾಮೆ ನೀಡಿದ ಬಳಿಕ ಸದನದಲ್ಲಿ ಪಕ್ಷದ ಸಂಖ್ಯಾಬಲ 15ಕ್ಕೆ ಇಳಿದಿದೆ.




## ಮಹಾಯೋಗಿ ವೇಮನರ ಸಾಹಿತ್ಯ, ಸಂಶೋಧನೆ ಕಾರ್ಯ ನಿರಂತರವಾಗಿರಲಿ

# ಕವಿವಿ ವೇಮನ ಪೀಠ ವಸತಿನಿಲಯ ಆರಂಭಕ್ಕೆ ಸರಕಾರದಿಂದ ಸಹಕಾರ: ಸಚಿವ ಎಚ್.ಕೆ.ಪಾಟೀಲ

*ಧಾರವಾಡ, ಜ.19 (ಕರ್ನಾಟಕ ವಾರ್ತೆ):* ಮಹಾಯೋಗಿ ವೇಮನ ಸಾಹಿತ್ಯ, ಸಂಶೋಧನೆ ಕುರಿತು ಹೆಚ್ಚಿನ ಕಾರ್ಯಗಳು ಆಗಬೇಕು. ವೇಮನ ಅಧ್ಯಯನ ಪೀಠದಿಂದ ವಿದ್ಯಾರ್ಥಿನಿಲಯ ಸ್ಥಾಪಿಸಲು ಕವಿವಿಯಿಂದ ಪ್ರಸ್ತಾವನೆ ಸಲ್ಲಿಸಿದರೆ, ಸರಕಾರ ಸಹಾಯ ಮಾಡಲಿದೆ ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರಾದ ಎಚ್.ಕೆ.ಪಾಟೀಲ ಅವರು ತಿಳಿಸಿದರು.

ಅವರು ಇಂದು ಮಧ್ಯಾಹ್ನ ಕವಿವಿಯ ಮಹಾಯೋಗಿ ವೇಮನ ಪೀಠದಲ್ಲಿ ಆಯೋಜಿಸಿದ್ದ ಮಹಾಯೋಗಿ ವೇಮನರ ಜಯಂತ್ಯೋತ್ಸವ ಹಾಗೂ ಮೂರ್ತಿ ಅನಾವರಣ ಕಾರ್ಯಕ್ರಮ ಉದ್ಘಾಟಿಸಿ, ಮಾತನಾಡಿದರು.

ವೇಮನರ ಸಂದೇಶಗಳನ್ನು ಜನಸಾಮಾನ್ಯರಿಗೆ ತಲುಪಿಸಲು ಮಹಾಯೋಗಿ ವೇಮನ ಪೀಠ ಹೆಚ್ಚು ಕ್ರಿಯಾಶೀಲವಾಗಿ ಕಾರ್ಯ ಮಾಡುತ್ತಿದೆ. ವೇಮನರ ಸಾಹಿತ್ಯ, ಸಂದೇಶಗಳ ಅನುವಾದ ಲೇಖಕಕರಾದ ಎಸ್. ಆರ್.ಪಾಟೀಲ ಅವರ ವೇಮನ ಸಾಹಿತ್ಯ ಇಂದು ದಾರಿ ಆಗಿದೆ.

ಕವಿವಿ ವೇಮನ ಪೀಠದಿಂದ ಜನಸಾಮಾನ್ಯರಿಗೆ ತಲುಪುವಂತೆ ವೇಮನರ ಜೀವನ ತತ್ವ, ಸಂದೇಶಗಳನ್ನು ಸರಳವಾದ ಭಾಗಘಯಲ್ಲಿ, ಸಣ್ಣ ಪುಸ್ತಕಗಳನ್ನಾಗಿ ರಚಿಸಿ, ವಿತರಿಸಬೇಕು ಎಂದು ಸಚಿವ ಎಚ್. ಕೆ.ಪಾಟೀಲ ಹೇಳಿದರು.

ಮಹಾಯೋಗಿ ವೇಮನ ಪೀಠದಲ್ಲಿ ಸಂಶೋಧನೆ, ಅಧ್ಯಯನ ಬೆಳೆಯಬೇಕು. ಮುಂದಿನ ದಿನಗಳಲ್ಲಿ 50 ವಿದ್ಯಾರ್ಥಿಗಳ ಅನುಕೂಲವಾಗುವಂತೆ ವಸತಿನಿಲಯ ಸ್ಥಾಪಿಸಲು ಸರಕಾರ ಸಹಕಾರ ನೀಡಲಿದೆ ಎಂದು ಸಚಿವರು ತಿಳಿಸಿದರು.




ಬಸವಣ್ಣನವರ ಜಾತಿರಹಿತ ಸಮಾಜ ರಚನೆ ಅದ್ಭುತವಾಗಿತ್ತು. ಮನುಕುಲದ ಒಳಿತಿಗಾಗಿ ಬಸವಣ್ಣನವರು ಶ್ರಮಿಸಿದ್ದಾರೆ. ಬಸವಣ್ಣನವರು ಈಗ ಕರ್ನಾಟಕದ ರಾಯಬಾರಿ, ನಾಯಕ. ಅವರ ಚರಿತ್ರೆ ಕನ್ನಡ ನಾಡಿನ ಇತಿಹಾಸವಾಗಿದೆ ಎಂದು ಸಚಿವರು ತಿಳಿಸಿದರು.

ಇಡೀ ವಿಶ್ವಕ್ಕೆ ಬಸವಣ್ಣವರ ಬಗ್ಗೆ ಪರಿಚಯಿಸಿದ್ದು, ಅವರ ಸಾಕಷ್ಟು ಸಂದೇಶಗಳನ್ನು ತಲುಪಿಸಿದ ಮಹತ್ತರ ಕಾರ್ಯವು ಕವಿವಿ ಶ್ರೇಯಸ್ಸಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಗೌರವ ಉಪಸ್ಥಿತರಿದ್ದ ಕರ್ನಾಟಕ ವಿಧಾನ ಪರಿಷತ್ತ ಸಭಾಪತಿ ಬಸವರಾಜ ಹೊರಟ್ಟಿ ಅವರು ಮಾತನಾಡಿ, ಮಹಾಯೋಗಿ ವೇಮನ ಪೀಠವು ಕವಿವಿಯ ಇತರ ಪೀಠಗಳಿಗೆ ಮಾದರಿಯಾಗಿದೆ.

ಹಿರಿಯ ಲೇಖಕ ಎಸ್.ಆರ್.ಪಾಟೀಲರು ತೆಲುಗು ಭಾಷಯಲ್ಲಿರುವ ಮಹಾಯೋಗಿ ವೇಮನರ ಸಾಹಿತ್ಯವನ್ನು ಕನ್ನಡಕ್ಕೆ ಭಾಗಣಂತರಿಸಿದ್ದರಿಂದ ಕನ್ನಡ ಸಾಹಿತ್ಯ ಮತ್ತು ಮಹಾಯೋಗಿ ವೇಮನರ ಶ್ರೀಮಂತವಾದ ಚರಿತ್ರೆ ಇಂದು ಮನೆಮಾತಾಗಿದೆ ಎಂದರು.

ನಾಡಿನ ಮಹಾನ ಪುರುಷರನ್ನು, ಮಹಾತ್ಮರನ್ನು ಯಾವುದೇ ಜಾತಿಗಳಿಗೆ ಸೀಮಿತಗೊಳಿಸಬಾರದು. ಮಹಾತ್ಮರ ಸಂದೇಶಗಳನ್ನು ಪ್ರತಿಯೊಬ್ಬರಿಗೆ ತಲುಪಿಸುವ ಕೆಲಸವಾಗಬೇಕು ಎಂದು ಸಭಾಪತಿ ಬಸವರಾಜ ಹೊರಟ್ಟಿ ತಿಳಿಸಿದರು.

ಎರೆಹೊಸಳ್ಳಿಯ ಮಹಾಯೋಗಿ ವೇಮನ ಸಂಸ್ಥಾನಮಠ ರಡ್ಡಿ ಗುರುಪೀಠದ ವೇಮನಾನಂದ ಮಹಾಸ್ವಾಮಿಗಳು ಕಾರ್ಯಕ್ರಮದ ದಿವ್ಯ ಸಾನಿಧ್ಯವಹಿಸಿ, ಆಶೀರ್ವಚನ ನೀಡಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಶಾಸಕರಾದ ಅರವಿಂದ ಬೆಲ್ಲದ, ಎನ್. ಎಚ್.ಕೋನರಡ್ಡಿ, ಪ್ರಕಾಶ ಕೋಳಿವಾಡ, ಮಾಜಿ ಶಾಸಕ ಡಿ.ಆರ್.ಪಾಟೀಲ, ಮಾಜಿ ಸಂಸದ ಪ್ರೊ.ಐ.ಜಿ.ಸನದಿ, ಕೆ.ಎಲ್.ಪಾಟೀಲ, ರಮೇಶ ಜಂಗಲ, ರಘುನಾಥ ಸಾಹುಕಾರ, ಜೆ.ಕೆ.ಜಮಾದಾರ, ಡಾ.ಗೋವಿಂದ ಮಣ್ಣೂರ, ರಘು ಲಕ್ಕಣ್ಣವರ, ವೇದಿಕೆಯಲ್ಲಿದ್ದರು.

ಕಾರ್ಯಕ್ರಮದ ಅಧ್ಯಕ್ಷತೆವಹಿಸಿದ್ದ ಕವಿವಿ ಕುಲಪತಿ ಪ್ರೊ.ಕೆ.ಬಿ.ಗುಡಸಿ ಅವರು ಮಾತನಾಡಿದರು.

ರಾಮದುರ್ಗದ ನಿವೃತ್ತ ಪ್ರಾಧ್ಯಾಪಕ ಪ್ರೊ.ಸಿದ್ದಣ್ಣ ಲಂಗೋಟಿ ಅವರು ಮಹಾಯೋಗಿ ಶ್ರೀ ವೇಮನರ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಅತಿಥಿಗಳಾಗಿ ಕವಿವಿ ಮೌಲ್ಯಮಾಪನ ಕುಲಸಚಿವ ಡಾ.ಎನ್.ವೈ.ಮಟ್ಟಿಹಾಳ, ಸಿಂಡಿಕೇಟ್ ಮಾಜಿ ಸದಸ್ಯ ವಸಂತ ಲದ್ವಾ, ಡಾ.ಆರ್ಸಿ.ಹಿರೇಮಠ ಕನ್ನಡ ಅಧ್ಯಯನ ಪೀಠದ ವಿಶ್ರಾಂತ ಪ್ರಾಧ್ಯಾಪಕ ಡಾ.ಕೃ. ಅನ್ವನ್, ಎಫ್.ಎಚ್.ಜಕ್ಕಪ್ಪನವರ, ಪ್ರತಾಪ ಚವ್ಹಾನ, ವಸಂತ ಅರ್ಕಾಚಾರಿ ಸೇರಿದಂತೆ ಇತರ ಗಣ್ಯರು ಉಪಸ್ಥಿತರಿದ್ದರು.

ಕುಲಸಚಿವ ಎ.ಚನ್ನಪ್ಪ ಸ್ವಾಗತಿಸಿದರು. ಮಹಾಯೋಗಿ ವೇಮನ ಪೀಠದ ಸಂಯೋಜಕ ಡಾ.ಎಚ್.ಬಿ.ನೀಲಗುಂದ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಉಮಾ ಅಂಕಲಗಿ ಅವರು ವೇಮನರ ಕುರಿತ ಭಕ್ತಿ ಗೀತೆಗಳನ್ನು ಪ್ರಸ್ತುತಪಡಿಸಿದರು.

ಮಹಾಯೋಗಿ ವೇಮನ ಪೀಠದ ಅಧ್ಯಾಪಕರು, ವಿದ್ಯಾರ್ಥಿಗಳು, ರಡ್ಡಿ ಸಮುದಾಯದ ಪ್ರಮುಖರು, ಸಾರ್ವಜನಿಕರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

---

### ಸೈಟ್ ಕೊಡದ ಹುಬ್ಬಳ್ಳಿಯ ರೇಣುಕಾ ಲಕ್ಷ್ಮೀ ಅಸೋಸಿಯೇಟ್ಸ್ಗೆ ದಂಡ ವಿಧಿಸಿ ಪರಿಹಾರ ನೀಡಲು ಆದೇಶ

ಧಾರವಾಡ: ಹುಬ್ಬಳ್ಳಿಯ ಗೋಕುಲ ರಸ್ತೆಯ ಮಂಜುನಾಥ ನಗರದ ನಿವಾಸಿ ಶಾರದಾ ಕೈರವಾಡಗಿರವರು ಹುಬ್ಬಳ್ಳಿಯ ರೇಣುಕಾ ಲಕ್ಷ್ಮೀ ಅಸೋಸಿಯೇಟ್ಸ್ ರವರು ನಾಗಶೆಟ್ಟಿಕೊಪ್ಪದಲ್ಲಿ ನಿರ್ಮಿಸುತ್ತಿದ್ದ ಗಣೇಶ ಟೌನ್ಶಿಪ್ನಲ್ಲಿ ರೂ.14,40,000/–ಗೆ 2400/– ಚ.ಅ.ಯ ಪ್ಲಾಟನ್ನು ಖರೀದಿಸಿದ್ದರು. ಈ ಬಗ್ಗೆ ದೂರುದಾರಳು ರೂ. 5,00,000/– ಅಡವಾನ್ಸ್ ಕೊಟ್ಟಿದ್ದರು. ಆ ಹಣ ಪಡೆದು ಎದುರುದಾರ ರೇಣುಕಾ ಲಕ್ಷ್ಮೀ ಅಸೋಸಿಯೇಟ್ಸ್ನ ಮಾಲೀಕ ಆನಂದ ಹಬೀಬ ದೂರುದಾರಳಿಗೆ ದಿ:22/01/2018 ರಂದುಖರೀದಿ ಕರಾರು ಪತ್ರ ಬರೆದುಕೊಟ್ಟಿದ್ದರು. ಹಲವಾರು ವರ್ಷಗಳು ಕಳೆದರೂ ಎದುರುದಾರರು ಸೈಟ್ಖರೀದಿ ಹಾಕಿಕೊಟ್ಟಿಲ್ಲ ಅಥವಾ ತನಗೆ ಹಣ ವಾಪಸ್ಸುಕೊಟ್ಟಿಲ್ಲ ಅಂತಾ ಹೇಳಿ ಎದುರುದಾರರ ಅಂತಹ ನಡಾವಳಿಕೆ ಗ್ರಾಹಕರ ರಕ್ಷಣಾ ಕಾಯಿದೆ ಅಡಿ ಸೇವಾ ನ್ಯೂನ್ಯತೆ ಆಗುತ್ತದೆ ಅಂತಾ ಹೇಳಿ ಅವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ಜಿಲ್ಲಾ ಗ್ರಾಹಕರ ಆಯೋಗಕ್ಕೆ ದಿ:29/09/2023 ರಂದು ಈ ದೂರನ್ನು ಸಲ್ಲಿಸಿದ್ದರು.

ಸದರಿ ದೂರಿನ ಬಗ್ಗೆ ಕೂಲಂಕುಷವಾಗಿ ವಿಚಾರಣೆ ನಡೆಸಿದ ಆಯೋಗದ ಅಧ್ಯಕ್ಷರಾದ ಈಶಪ್ಪ.ಕ.ಭೂತೆ, ಸದಸ್ಯರಾದ ವಿಶಾಲಾಕ್ಷಿ.ಅ. ಬೋಳಶೆಟ್ಟಿ ಹಾಗೂ ಪ್ರಭು .ಸಿ ಹಿರೇಮಠ ನಿಗದಿತಅವದಿಯಲ್ಲಿ ಶ್ರೀ. ಗಣೇಶ ಲೇಔಟ್ ನಿರ್ಮಿಸಿ ಅದರಲ್ಲಿದೂರುದಾರರಿಗೆ ಮಾರಾಟ ಮಾಡಿದ ಪ್ಲಾಟ ನಂ.8ರ ಖರೀದಿ ಪತ್ರ ನೋಂದಾಯಿಸಿಕೊಡುವುದು ಎದುರುದಾರರೇಣುಕಾ ಲಕ್ಷ್ಮೀ ಅಸೋಸಿಯೇಟ್ಸ್ರವರ ಕರ್ತವ್ಯವಾಗಿದೆ. ಆದರೆ 6–7 ವರ್ಷ ಕಳೆದರೂ ಎದುರುದಾರ ಆನಂದ ಹಬೀಬ ರವರುಲೇಔಟ ನಿರ್ಮಾಣ ಮಾಡಿಲ್ಲ. ದೂರುದಾರರಿಗೆ ಪ್ಲಾಟನ್ನು ಖರೀದಿ ಮಾಡಿಕೊಟ್ಟಿಲ್ಲ. ಅಂತಹ ಅವರ ನಡಾವಳಿಕೆ ಅನುಚಿತ ವ್ಯಾಪಾರದ ಪದ್ಧತಿ ಹಾಗೂ ಗ್ರಾಹಕರ ರಕ್ಷಣಾಕಾಯ್ದೆ ಅಡಿ ಸೇವಾ ನ್ಯೂನ್ಯತೆ ಆಗುತ್ತದೆ ಅಂತಾ ಆಯೋಗ ಅಭಿಪ್ರಾಯ ಪಟ್ಟು ತೀಪು ನೀಡಿದೆ.

ದೂರುದಾರ ರಿಂದ ಮುಂಗಡವಾಗಿ ಪಡೆದರೂ. 5 ಲಕ್ಷದಲ್ಲಿ ರೂ.1 ಲಕ್ಷಎದುರುದಾರ ಹಿಂದಿರುಗಿಸಿದ್ದು ಉಳಿದ ರೂ. 4 ಲಕ್ಷಗಳ ಮೇಲೆ ದಿ:22/01/2018 ರಿಂದ ಪೂರ್ತಿ ಹಣ ಸಂದಾಯ ವಾಗುವವರೆಗೆ ಶೇ8% ರಂತೆ ಬಡ್ಡಿ ಲೆಕ್ಕ ಹಾಕಿ ಹಿಂದಿರುಗಿಸುವಂತೆ ಆಯೋಗ ಎದುರುದಾರ ಆನಂದ ಹಬೀಬರವರಿಗೆ ನಿರ್ದೇಶಿಸಿದೆ. ದೂರುದಾರರಿಗೆ ಆಗಿರುವ ಅನಾನುಕೂಲ ಮತ್ತು ಮಾನಸಿಕ ಹಿಂಸೆಗಾಗಿ ರೂ.50,000/– ಪರಿಹಾರ ಮತ್ತು ಪ್ರಕರಣದಖರ್ಚು ವೆಚ್ಚ ಅಂತಾ ರೂ.10,000/– ಎದುರುದಾರರಿಗೆ ಕೊಡಲು ಆದೇಶಿಸಿದೆ.



## ಅಗ್ನಿವೀರ್ ವಾಯುಪಡೆ ಪ್ರವೇಶ ಪರೀಕ್ಷೆ: ಅರ್ಜಿ ಆಹ್ವಾನ

ಮಂಗಳೂರು: ಭಾರತೀಯ ವಾಯುಪಡೆಯಿಂದ ಅಗ್ನಿಪಥ್ ಯೋಜನೆ ಅಡಿಯಲ್ಲಿ ಅಗ್ನಿವೀರ್ ವಾಯು ಪ್ರವೇಶ ಆಯ್ಕೆ ಪರೀಕ್ಷೆಗೆ ಆನ್‌ಲೈನ್ ಮೂಲಕ ಫೆಬ್ರವರಿ 6 ರೊಳಗೆ ಅರ್ಜಿ ಆಹ್ವಾನಿಸಲಾಗಿದೆ.

ಅಭ್ಯರ್ಥಿಗಳು ಪಿಯುಸಿ ವಿಜ್ಞಾನ ವಾಣಿಜ್ಯ, ಕಲಾವಿಭಾಗದಲ್ಲಿ ಅಥವಾ ಡಿಪ್ಲೋಮೋ ಕೋರ್ಸ್‌ಗಳಲ್ಲಿ ಶೇಕಡ 50ರಷ್ಟು ಅಂಕಗಳೊಂದಿಗೆ ಮತ್ತು ಇಂಗ್ಲಿಷ್ ವಿಷಯದಲ್ಲಿ ಶೇಕಡ 50ರಷ್ಟು ಅಂಕಗಳೊಂದಿಗೆ ತೇರ್ಗಡೆ ಆಗಿರಬೇಕು.

2004ರ ಜನವರಿ 2ರಿಂದ 2007ರ ಜುಲೈ 2ರ ನಡುವೆ ಜನಿಸಿರಬೇಕು. ಹೆಚ್ಚಿನ ಮಾಹಿತಿಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ದೂರವಾಣಿ ಸಂಖ್ಯೆ: 0824–2457139 ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗಾಧಿಕಾರಿ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

## ಹೋಟೆಲ್ ಒಂದರಲ್ಲಿ ಅಸ್ಪೃಶ್ಯತೆ ಭೂತ: ಸ್ಥಳಕ್ಕೆ ತಹಶೀಲ್ದಾರ್ ಭೇಟಿ



ಬಳ್ಳಾರಿ: ಜಿಲ್ಲೆಯ ಕುರುಗೋಡು ತಾಲೂಕಿನ ಗುತ್ತಿಗನೂರು ಗ್ರಾಮದಲ್ಲಿರುವ ಹೋಟೆಲ್ ಒಂದರಲ್ಲಿ ದಲಿತರಿಗೆ ಆಹಾರ ನೀಡಲು ನಿರಾಕರಿಸಿದ ಆರೋಪ ಕೇಳಿಬಂದಿದೆ.

ಹೋಟೇಲ್‌ನಲ್ಲಿ ದಲಿತರಿಗೆ ಆಹಾರ ನೀಡಲು ಮಹಿಳೆಯೊಬ್ಬರು ನಿರಾಕರಿಸಿ ಕ್ಯಾತೆ ತೆಗೆದ ವಿಡಿಯೋ ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ. ಆಹಾರ ನೀಡಲು ನಿರಾಕರಿಸಿದ ಹಿನ್ನೆಲೆಯಲ್ಲಿ ಕೆಲವು ದಲಿತ ಯುವಕರು ಬೇಸರ ವ್ಯಕ್ತಪಡಿಸಿ ಆ ಮಹಿಳೆ ಜೊತೆ ವಾಗ್ವಾದ ನಡೆಸಿದ್ದಾರೆ.

ನಿಮಗೆ ಆಹಾರ ನೀಡಲು ಆಗುವುದಿಲ್ಲ, ನಾನು ಹೋಟೆಲ್ ಬಾಗಿಲು ಬಂದ್ ಮಾಡ್ತೀನಿ. ಏನ್ ಬೇಕಾದರೂ ಮಾಡಿಕೊಳ್ಳಿ ಊಟ ಕೊಡಲ್ಲ ಎಂದು ಆವಾಜ್ ಹಾಕಿದ್ದಾರೆ. ಸೋಶಿಯಲ್ ಮೀಡಿಯಾದಲ್ಲಿ ವಿಡಿಯೋ ಹರಿದಾಡುತ್ತಿದ್ದಂತೆಯೇ ಎಚ್ಚೆತ್ತುಕೊಂಡ ಅಧಿಕಾರಿಗಳು ಗ್ರಾಮಕ್ಕೆ ಭೇಟಿ ನೀಡಿದ್ದಾರೆ. ತಹಶಿಲ್ದಾರ್ ರಾಘವೇಂದ್ರ ಸೇರಿದಂತೆ ಹಲವು ಅಧಿಕಾರಿಗಳು ಭೇಟಿ ನೀಡಿದ್ದಾರೆ.

---

# ಗುಜರಾತ್ ದೋಣಿ ದುರಂತದಲ್ಲಿ 14 ಮಕ್ಕಳ ಸಾವು

## ಹರ್ನಿ ಲೇಕ್ ಮ್ಯಾನೇಜರ್ ಸೇರಿ ಮೂವರ ಬಂಧನ

ವಡೋದರಾ: ವಡೋದರಾದ ಹರ್ನಿ ಲೇಕ್ ದೋಣಿ ದುರಂತ ಸಂಬಂಧ 18 ಜನರ ವಿರುದ್ಧ ಎಫ್ಐಆರ್ ದಾಖಲಾಗಿದ್ದು ಹರ್ನಿ ಲೇಕ್ ಮ್ಯಾನೇಜರ್ ಸೇರಿ ಮೂವರನ್ನು ಪೊಲೀಸರು ಬಂಧಿಸಿದ್ದಾರೆ. ಹರ್ನಿ ಲೇಕ್ ನ ಮುಖ್ಯ ಗುತ್ತಿಗೆದಾರ ಪರೇಶ್ ಶಾ ತಲೆಮರೆಸಿಕೊಂಡಿದ್ದಾನೆ.

ದುರಂತದಲ್ಲಿ 14 ಮಕ್ಕಳು ಮತ್ತು ಇಬ್ಬರು ಶಿಕ್ಷಕರು ಸಾವನ್ನಪ್ಪಿದ್ದರು. 16 ಜನರ ಸಾಮರ್ಥ್ಯದ ಬೋಟ್ ನಲ್ಲಿ ಸಾಮರ್ಥ್ಯಕ್ಕಿಂತ ಹೆಚ್ಚಿನ ಜನರನ್ನು ತುಂಬಲಾಗಿತ್ತು ಎಂದು ಪೊಲೀಸ್ ತನಿಖೆಯಿಂದ ತಿಳಿದುಬಂದಿದೆ. ದೋಣಿಯಲ್ಲಿ 23 ವಿದ್ಯಾರ್ಥಿಗಳು ಮತ್ತು ನಾಲ್ವರು ಶಿಕ್ಷಕರು ಸೇರಿದ್ದಾರೆ. ಇನ್ನುಳಿದಂತೆ 11 ಮಕ್ಕಳು ಮತ್ತು ಇಬ್ಬರು ಶಿಕ್ಷಕರನ್ನು ರಕ್ಷಿಸಲಾಗಿದೆ.

ಕೆಲವು ವಿದ್ಯಾರ್ಥಿಗಳು ಮಾತ್ರ ಲೈಫ್ ಜಾಕೆಟ್ ಧರಿಸಿದ್ದು, ಉಳಿದವರು ಲೈಫ್ ಜಾಕೆಟ್ ಇಲ್ಲದೇ ಇರುವುದು ತನಿಖೆಯಿಂದ ತಿಳಿದುಬಂದಿದೆ. ಅಪಘಾತದ ನಂತರ ವಡೋದರಾ ತಲುಪಿದ ಗುಜರಾತ್ ಮುಖ್ಯಮಂತ್ರಿ ಭೂಪೇಂದ್ರ ಪಟೇಲ್ ಅವರು ಈ ಪ್ರಕರಣದ ತನಿಖೆಯನ್ನು ಕಲೆಕ್ಟರ್ ಎಬಿ ಗೋರ್ ಅವರಿಗೆ ಹಸ್ತಾಂತರಿಸಿದ್ದಾರೆ. 10 ದಿನದೊಳಗೆ ತನಿಖೆ ಪೂರ್ಣಗೊಳಿಸಿ ಸರಕಾರಕ್ಕೆ



ಹಸ್ತಾಂತರಿಸುವಂತೆ ಸೂಚನೆ ನೀಡಲಾಗಿದೆ.

ಬೋಟ್ ಚಾಲಕ ಮತ್ತು ನಿರ್ವಾಹಕನನ್ನು ಪೊಲೀಸರು ಬಂಧಿಸಿ ವಿಚಾರಣೆ ನಡೆಸುತ್ತಿದ್ದಾರೆ. ಪೊಲೀಸರ ಎಫ್ಐಆರ್ ನಲ್ಲಿ ಒ/ ಕೋಟಿಯಾ ಪ್ರಾಜೆಕ್ಟ್ ಮ್ಯಾನೇಜರ್ ಬಿನೀತ್ ಕೋಟಿಯಾ, ಹಿತೇಶ್ ಕೋಟಿಯಾ, ಗೋಪಾಲದಾಸ್ ಶಾ, ವತ್ಸಲ್ ಶಾ, ಜತಿನ್ ಕುಮಾರ್ ಹರಿಲಾಲ್ ದೋಷಿ, ದೀಪೆನ್ ಶಾ, ಧರ್ಮಿಲ್ ಶಾ, ರಶ್ಮಿಕಾಂತ್ ಸಿ ಪ್ರಜಾಪತಿ, ನೇಹಾ ಡಿ ದೋಷಿ, ನೂತನ್ ಬೆನ್ ಪಿ ಶಾ, ತೇಜಲ್ ಆಶಿಶ್ ಕುಮಾರ್ ದೋಷಿ, ಭೀಮ್ ಸಿಂಗ್ ಸೇರಿದಂತೆ 18 ಮಂದಿ ಹೆಸರು ಸೇರಿಸಲಾಗಿದೆ.

ದುರಂತದಲ್ಲಿ ಮೃತಪಟ್ಟವರನ್ನು ಮೊಹಮ್ಮದ್ ಅಯಾನ್, ಮೊಹಮ್ಮದ್ ಅನೀಸ್ ಗಾಂಧಿ(13), ರೋಶ್ನಿ ಪಂಕಜಭಾಯಿ ಶಿಂಧೆ(10), ರುತ್ವಿ ಪ್ರತೀಕ್ ಶಾ(10), ಜಹಬಿಯಾ ಮೊಹಮ್ಮದ್ ಯೂನಸ್ ಸುಬೇದಾರ್(10), ವಿಶ್ವಕುಮಾರ್ ಕಲ್ಪೇಶಭಾಯ್ ನಿಜಾಮ(10), ರಾಯನ್, ಹರುನ್ ಖಲೀಫಾ(10), ಸಕೀನಾ ಸೋಕತ್ ಅಬ್ದುಲ್ಲಸೂರ್(9), ಫಲ್ಗುಣಿಬೆನ್ ಮನೀಶ್‌ಭಾಯ್ ಪಟೇಲ್(45), ಅಲಿಸಾಬಾನು ಮಹಮದ್ ಒಮರ್ ಕೊಠಾರಿವಾಲಾ(9), ಮುವ್ವಾಜಾ ಮೊಹಮ್ಮದ್ ಮಹಿರ್ ಶೇಖ್(8), ನ್ಯಾನ್ಸಿ ರಾಹುಲ್ ಮಾಲಿ(8), ಅಯತ್ ಅಲ್ತಾಫ್ ಹುಸೇನಿ ಮನ್ಸೂರಿ( 9), ಆಸಿಯಾ ಫಾರೂಕ್ ಖಲೀಫಾ(11), ಛಾಯಾಬೆನ್ ಸೂರ್ತಿ(45).

ಮಾಹಿತಿ ಪ್ರಕಾರ, ವಡೋದರಾ ನಗರದ ಹೊರವಲಯದಲ್ಲಿ ದೋಣಿ ದುರಂತ ಸಂಭವಿಸಿದೆ. ಹರ್ನಿ ತಾಲಾಬ್‌ನಲ್ಲಿ ಸಂಭವಿಸಿದ ಅಪಘಾತದಲ್ಲಿ ಬಲಿಯಾದ ಮಕ್ಕಳು ನ್ಯೂ ಸನ್‌ರೈಸ್ ಶಾಲೆಗೆ ಸೇರಿದ್ದಾರೆ. ದೋಣಿಯಲ್ಲಿದ್ದ ವಿದ್ಯಾರ್ಥಿಗಳು ವಿಹಾರಕ್ಕೆ ತೆರಳಿದ್ದರು.

ಎಲ್ಲಾ ಮಕ್ಕಳು ಮತ್ತು ಶಿಕ್ಷಕರು ಸೆಲ್ಫಿಗಾಗಿ ದೋಣಿಯ ಒಂದು ಬದಿಗೆ ಬಂದಿದ್ದು ಇದರಿಂದಾಗಿ ದೋಣಿ ನಿಯಂತ್ರಣ ತಪ್ಪಿ ಪಲ್ಟಿಯಾಗಿದೆ ಎಂದು ಹೇಳಲಾಗುತ್ತಿದೆ.

---

## ಪಿಎಸ್ಐ ಕೈಯಲ್ಲಿ ಅರಳಿದ ಶ್ರೀರಾಮಮಂದಿರ ಚಿತ್ರ



ಬೆಂಗಳೂರು: ಪೊಲೀಸ್ ಇಲಾಖೆಯಲ್ಲಿ ಉತ್ತಮ ಸೇವೆ ಸಲ್ಲಿಸುತ್ತಿರುವ ಗಿರಿನಗರ ಪೊಲೀಸ್ ಠಾಣೆ ಸಬ್ಇನ್ಸ್ಪೆಕ್ಟರ್ ಮಂಜುನಾಥ್ ಅವರು ಇದೀಗ ರಾಮಮಂದಿರದ ಚಿತ್ರ ಬಿಡಿಸಿ ಗಮನ ಸೆಳೆದಿದ್ದಾರೆ. ಚಿತ್ರಕಲೆಯಲ್ಲಿ ಆಸಕ್ತಿ ಹೊಂದಿರುವ ಮಂಜುನಾಥ್ ಅವರು ಹವ್ಯಾಸವಾಗಿ ರೂಢಿಸಿಕೊಂಡು ಅಧಿಕಾರಿಗಳ ಮೆಚ್ಚುಗೆಗೆ ಪಾತ್ರರಾಗಿದ್ದಾರೆ.

ಮಡಿಕೇರಿ ಜಿಲ್ಲೆ ಕುಶಾಲನಗರ ತಾಲೂಕಿನ ವಾರನೂರು ನಿವಾಸಿಯಾಗಿರುವ ಮಂಜುನಾಥ್ ಅವರು ಎಂಎಸ್ಸಿ ಪದವೀಧರರು. ಮೈಸೂರಿನಲ್ಲಿ ವಿದ್ಯಾಭ್ಯಾಸ ಮಾಡಿ, 2012 ರಲ್ಲಿ ಪೊಲೀಸ್ ಇಲಾಖೆಗೆ ಸೇರ್ಪಡೆಯಾಗಿದ್ದಾರೆ. ಮಂಜುನಾಥ್ ಅವರು ಇದುವರೆಗೂ ಒಂದು ಸಾವಿರಕ್ಕೂ ಹೆಚ್ಚು ದೇವರ ಚಿತ್ರಗಳು, ಪ್ರಕೃತಿ ಸೌಂದರ್ಯದ ಸೊಬಗಿನ ಚಿತ್ರಗಳು ಹಾಗೂ ಪ್ರಮುಖ ವ್ಯಕ್ತಿಗಳ ಚಿತ್ರಗಳನ್ನು ಬಿಡಿಸುವ ಮೂಲಕ ಪ್ರಶಂಸೆ ಗಳಿಸಿದ್ದಾರೆ.

ಅಯೋಧ್ಯೆಯಲ್ಲಿ ಭವ್ಯ ರಾಮಮಂದಿರ ನಿರ್ಮಾಣ ವಾಗುತ್ತಿದ್ದು, ರಾಮಲಲ್ಲಾ ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಕಾರ್ಯಕ್ರಮ ಕಣ್ತುಂಬಿಕೊಳ್ಳಲು ಜಗತ್ತೇ ಕಾಯುತ್ತಿದೆ. ಈ ಸಂದರ್ಭದಲ್ಲಿ ಮಂಜುನಾಥ್ ಅವರು ಶ್ರೀರಾಮಮಂದಿರದ ಚಿತ್ರವನ್ನು ತಮ್ಮ ಕುಂಚದಲ್ಲಿ ಅರಳಿಸಿದ್ದಾರೆ. ಮಂಜುನಾಥ್ ಅವರು ಚಿತ್ರ ಬಿಡಿಸುತ್ತಿರುವ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದ್ದು, ಜನತೆ ಅವರಿಗೆ ಸೆಲ್ಯೂಟ್ ಹೊಡೆದು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ದೇಶದ ಅಸಂಖ್ಯಾತ ಭಕ್ತರು ಕಲೆ, ಸಾಹಿತ್ಯ, ಸಂಗೀತ ಹೀಗೆ ವಿವಿಧ ರೀತಿಯಲ್ಲಿ ರಾಮನಿಗೆ ಭಕ್ತಿ ಸಮರ್ಪಿಸುತ್ತಿದ್ದಾರೆ.


---

# ಅಯೋಧ್ಯೆ ರಾಮ ಮಂದಿರ: ಗರ್ಭಗುಡಿಯೊಳಗೆ ರಾಮಲಲ್ಲಾ ವಿಗ್ರಹ ಪ್ರತಿಷ್ಠಾಪನೆ; ಫೋಟೋ ವೈರಲ್

ಅಯೋಧ್ಯೆ: ಅಯೋಧ್ಯೆ ರಾಮ ಮಂದಿರದ ಗರ್ಭಗೃಹದಲ್ಲಿ ಇರಿಸಲಾದ ರಾಮ್ ಲಲ್ಲಾನ ವಿಗ್ರಹದ ಮೊದಲ ಚಿತ್ರಗಳು ಹೊರಬಂದಿವೆ. 51 ಇಂಚಿನ ರಾಮ್ ಲಲ್ಲಾ ವಿಗ್ರಹವನ್ನು ಬಿಳಿ ಬಟ್ಟೆಯಲ್ಲಿ ಸುತ್ತಿ ನಿಲ್ಲಿಸಿರುವ ಭಂಗಿಯಲ್ಲಿ ಕಾಣಬಹುದು. ರಾಮ್ ಲಲ್ಲಾ ವಿಗ್ರಹವು 150 ಕೆಜಿಗಿಂತ ಹೆಚ್ಚು ತೂಕವಿದ್ದು, ಇದನ್ನು ಮೈಸೂರಿನ ಖ್ಯಾತ ಶಿಲ್ಪಿ ಅರುಣ್ ಯೋಗಿರಾಜ್ ಕೆತ್ತಿದ್ದಾರೆ.

ಭಗವಾನ್ ರಾಮ ಮತ್ತು ಅವರ ಸಹೋದರರ ಮೂಲ ವಿಗ್ರಹಗಳನ್ನು ಗರ್ಭಗುಡಿಯೊಳಗಿನ ಹೊಸ ವಿಗ್ರಹ ಅಥವಾ ಜನವರಿ 22 ರ ಸಮಾರಂಭದ ಮೊದಲು 'ಗರ್ಭಗೃಹ'ದ ಮುಂದೆ ಸ್ಥಾಪಿಸಲಾಗುವುದು. 1949 ರಿಂದ ಪೂಜಿಸಲ್ಪಡುತ್ತಿರುವ ಮೂಲ ವಿಗ್ರಹಗಳನ್ನು ಪ್ರಸ್ತುತ ಆವರಣದೊಳಗೆ ನಿರ್ಮಿಸಲಾದ ದೇವಾಲಯದಲ್ಲಿ ಇರಿಸಲಾಗಿದೆ. ಜನವರಿ 22 ರ 'ಪ್ರಾಣ ಪ್ರತಿಷ್ಠಾನ' ಸಮಾರಂಭದ ಮೊದಲು ಹೊಸ ದೇವಾಲಯಕ್ಕೆ ಸ್ಥಳಾಂತರಿಸಲಾಗುತ್ತದೆ.

ಪ್ರಾರ್ಥನೆಯ ಪಠಣಗಳ ನಡುವೆ ರಾಮ್ ಲಲ್ಲಾ ಮೂರ್ತಿಯನ್ನು ಗರ್ಭಗುಡಿಯಲ್ಲಿ ಇರಿಸಲಾಯಿತು ಎಂದು ಪವಿತ್ರೀಕರಣ ಸಮಾರಂಭಕ್ಕೆ ಸಂಬಂಧಿಸಿದ ಅರ್ಚಕ ಅರುಣ್ ದೀಕ್ಷಿತ್ ಸುದ್ದಿ ಸಂಸ್ಥೆಗಳಿಗೆ ತಿಳಿಸಿದ್ದಾರೆ. ರಾಮ ಜನ್ಮಭೂಮಿ ತೀರ್ಥ ಕ್ಷೇತ್ರದ ಸದಸ್ಯರು ಕೂಡ ಪ್ರಾರ್ಥನೆಯಲ್ಲಿ ಭಾಗವಹಿಸಿದ್ದರು ಎಂದು ವಿಶ್ವ ಹಿಂದೂ ಪರಿಷತ್ (VHP) ಹೇಳಿದೆ.



ಟ್ರಸ್ಟ್‌ನ ಸದಸ್ಯ ಅನಿಲ್ ಮಿಶ್ರಾ ಅವರು 'ಪ್ರಧಾನ ಸಂಕಲ್ಪ'ವನ್ನು ನಡೆಸಿದರು. ಪ್ರಧಾನ ಸಂಕಲ್ಪದ ಹಿಂದಿನ ಕಲ್ಪನೆಯೆಂದರೆ, ಭಗವಾನ್ ರಾಮನ 'ಪ್ರತಿಷ್ಠೆ'ಯನ್ನು ಎಲ್ಲರ ಕಲ್ಯಾಣಕ್ಕಾಗಿ, ರಾಷ್ಟ್ರದ ಕಲ್ಯಾಣಕ್ಕಾಗಿ, ಮಾನವೀಯತೆಯ ಕಲ್ಯಾಣಕ್ಕಾಗಿ ಮತ್ತು ಈ ಕೆಲಸಕ್ಕೆ ಕೊಡುಗೆ ನೀಡಿದವರಿಗಾಗಿ ಮಾಡಲಾಗುತ್ತಿದೆ ಎಂದು ದೀಕ್ಷಿತ್ ಹೇಳಿದರು.

ಪ್ರಧಾನಿ ನರೇಂದ್ರ ಮೋದಿ ಅವರು ಜನವರಿ 22 ರಂದು ರಾಮಮಂದಿರದಲ್ಲಿ 'ಪ್ರಾಣ ಪ್ರತಿಷ್ಠಾ' ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ, ಅಂದು ಅಯೋಧ್ಯೆಗೆ ಭೇಟಿ ನೀಡದಂತೆ ಸಾರ್ವಜನಿಕರಿಗೆ ಮನವಿ ಮಾಡಿದ್ದಾರೆ. ಬದಲಾಗಿ, ಜನವರಿ 23 ರಿಂದ ಸಾರ್ವಜನಿಕರಿಗೆ ದೇವಸ್ಥಾನವನ್ನು ತೆರೆಯುವ ನಂತರ ಎಲ್ಲರೂ ಭೇಟಿ ನೀಡುವಂತೆ ಅವರು ಸಾರ್ವಜನಿಕರನ್ನು ಕೇಳಿಕೊಂಡಿದ್ದಾರೆ.

---

## ಶವ ಸಾಗಿಸುತ್ತಿದ್ದ ಕಾರಿನ ಟೈರ್ ಸ್ಫೋಟ: ಸ್ಥಳದಲ್ಲೇ ಮೂವರು ದುರ್ಮರಣ




ಚಿತ್ರದುರ್ಗ: ಶವ ಸಾಗಿಸುತ್ತಿದ್ದ ಕಾರಿನ ಟೈರ್ ಸ್ಫೋಟಗೊಂಡು ಮೂವರು ಮೃತಪಟ್ಟ ಘಟನೆ ಚಿತ್ರದುರ್ಗದಲ್ಲಿ ನಡೆದಿದೆ.

ಚಿತ್ರದುರ್ಗ ಜಿಲ್ಲೆ ಮೊಳಕಾಲ್ಮೂರು ತಾಲೂಕಿನ ರಾಂಪುರ ಬಳಿ ರಾ.ಹೆದ್ದಾರಿ 150 ರಲ್ಲಿ ಈ ದುರಂತ ನಡೆದಿದೆ. ಶವ ಸಾಗಿಸುತ್ತಿದ್ದ ಕಾರಿನ ಟೈರ್ ಸ್ಫೋಟಗೊಂಡು ಕಾರು ಪಲ್ಟಿಯಾಗಿ ಮೂವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಮೃತರ ಗುರುತು ಪತ್ತೆಯಾಗಿಲ್ಲ. ಕ್ಯಾನ್ಸರ್ ನಿಂದ ಬಳಲುತ್ತಿದ್ದ ವೃದ್ದೆಯೊಬ್ಬರು ಬೆಂಗಳೂರಿನ ಆಸ್ಪತ್ರೆಯಲ್ಲಿ ಮೃತಪಟ್ಟಿದ್ದರು. ಅವರ ಶವವನ್ನು ವೃದ್ದೆಯ ಕುಟುಂಬಸ್ಥರು ಖಾಸಗಿ ವಾಹನದಲ್ಲಿ ಊರಿಗೆ ತೆಗೆದುಕೊಂಡು ಹೋಗುತ್ತಿದ್ದಾಗ ಈ ದುರ್ಘಟನೆ ಸಂಭವಿಸಿದೆ ಎಂದು ತಿಳಿದು ಬಂದಿದೆ.

## ರಾಮ ಲಲ್ಲಾ ವಿಗ್ರಹ ಕೆತ್ತಿದ ಅರುಣ್ ಯೋಗಿರಾಜ್ ಕುಟುಂಬಸ್ಥರನ್ನು ಸನ್ಮಾನಿಸಿದ ಸಂಸದ ಪ್ರತಾಪ್ ಸಿಂಹ

ಮೈಸೂರು : ಅಯೋಧ್ಯೆ ರಾಮ ಮಂದಿರದ ಗರ್ಭಗೃಹದಲ್ಲಿ ಇರಿಸಲಾದ ರಾಮ ಲಲ್ಲಾನ ವಿಗ್ರಹ ಕೆತ್ತನೆ ಮಾಡಿರುವ ಮೈಸೂರಿನ ಅರುಣ್ ಯೋಗಿ ರಾಜ್ ಕುಟುಂಬದವರಿಗೆ ಸಂಸದ ಪ್ರತಾಪ್ ಸಿಂಹ ಹಾಗೂ ಶಾಸಕ ಶ್ರೀವತ್ಸ ಅವರ ನೇತೃತ್ವದ ತಂಡ ಸನ್ಮಾನಿಸಿ ಗೌರವಿಸಿದ್ದಾರೆ.

ಮಧ್ಯಾಹ್ನ ಅರುಣ್ ಯೋಗಿರಾಜ್ ಅವರ ತಾಯಿ ಸರಸ್ವತಿ, ಸಹೋದರ ಸೂರ್ಯ ಪ್ರಕಾಶ್ ಹಾಗೂ ಪತ್ನಿ ವಿಜೇತ ಅವರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಸಂಸದ ಪ್ರತಾಪ್ ಸಿಂಹ ಮಾತನಾಡಿ, ಅಯೋಧ್ಯೆಗೆ



ನಿರ್ಮಾಣವಾಗುತ್ತಿರುವ ಶ್ರೀರಾಮ ಮಂದಿರಕ್ಕೂ ಮೈಸೂರಿಗೆ ಅವಿನಾಭವ ಸಂಬಂಧ ಉಂಟಾಗಿದೆ. ರಾಮಲಲ್ಲಾ ವಿಗ್ರಹದ ಕಲ್ಲು ಮೈಸೂರು ತಾಲ್ಲೂಕಿನ ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಗುಜ್ಜೆಗೌಡನಹುಂಡಿಯ ಹಿಂದುಳಿದ ವರ್ಗದ ಸಮುದಾಯದ ರಾಮದಾಸ್ ಎಂಬುವವರ ಜಮೀನಿನದ್ದಾಗಿದೆ. ಕೆತ್ತನೆ ಕಾರ್ಯ ಸಹ ಮೈಸೂರಿನ ಅರುಣ್ ಯೋಗಿರಾಜ್ ರವರದ್ದಾಗಿದೆ, ಮುಂದಿನ ಹಲವಾರು ಶತಮಾನಗಳ ವರೆಗೂ ಸಹ ಇವರ ಕಾರ್ಯದ ಬಗ್ಗೆ ಮೆಚ್ಚುಗೆ ವ್ಯಕ್ತವಾಗಲಿದೆ ಎಂದರು.

ಇದೇ 22 ರಂದು ದೇಶಾದ್ಯಂತ ಎಲ್ಲಾ ಮಂದಿರಗಳಲ್ಲಿ ಪೂಜೆ ಪುನಸ್ಕಾರಗಳು ನೆರವೇರುವ ಮೂಲಕ ರಾಮಮಂದಿರದ ಗರ್ಭಗುಡಿಯಲ್ಲಿ ಪ್ರಾಣ ಪ್ರತಿಷ್ಠಾನದ ಮುಖಾಂತರ ಶ್ರೀರಾಮ ಮಂದಿರ ಉದ್ಘಾಟನೆಗೊಂಡು ಕೋಟ್ಯಂತರ ಜನರ ಕನಸು ನನಸಾಗುವ ಕ್ಷಣಗಣನೆ ಆರಂಭವಾಗಿದೆ ಎಂದು ತಿಳಿಸಿದರು. ಈ ವೇಳೆ ಬಿಜೆಪಿ ನಗರಾಧ್ಯಕ್ಷ ಎಲ್ ನಾಗೇಂದ್ರ ಹಾಗೂ ಹಲವಾರು ಬಿಜೆಪಿ ಮುಖಂಡರು ಭಾಗಿಯಾಗಿದ್ದರು.

---

## ಸಂಸತ್ ಭದ್ರತಾ ಲೋಪ: ಆರೋಪ ಗಂಭೀರ ಎಂದ ನ್ಯಾಯಾಲಯ, ನೀಲಂ ಆಜಾದ್‌ಗೆ ಜಾಮೀನು ನಿರಾಕರಣೆ

ನವದೆಹಲಿ: ಸಂಸತ್ತಿನ ಭದ್ರತಾ ಲೋಪ ಪ್ರಕರಣದಲ್ಲಿ ಬಂಧಿತರಾಗಿರುವ ನೀಲಂ ಆಜಾದ್ ಅವರ ಜಾಮೀನು ಅರ್ಜಿಯನ್ನು ದೆಹಲಿ ನ್ಯಾಯಾಲಯ ಗುರುವಾರ ವಜಾಗೊಳಿಸಿದೆ. ತನಿಖೆಯು ಆರಂಭಿಕ ಹಂತದಲ್ಲಿದ್ದು, ಅವರು ದೇಶದ ಸಾರ್ವಭೌಮತೆ ಮತ್ತು ಸಮಗ್ರತೆಯನ್ನು ಅಡ್ಡಿಪಡಿಸಲು ಪ್ರಯತ್ನಿಸುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

ಈ ಪ್ರಕರಣದ ಎಫ್ಐಆರ್ ಅನ್ನು ಭಯೋತ್ಪಾದನಾ ವಿರೋಧಿ ಕಾನೂನು, ಕಾನೂನುಬಾಹಿರ ಚಟುವಟಿಕೆಗಳು (ತಡೆಗಟ್ಟುವಿಕೆ) ಕಾಯ್ದೆ ಮತ್ತು ಭಾರತೀಯ ದಂಡ ಸಂಹಿತೆಯ



ವಿವಿಧ ವಿಭಾಗಗಳ ಅಡಿಯಲ್ಲಿ ದಾಖಲಿಸಲಾಗಿದೆ ಎಂದು ಹೆಚ್ಚುವರಿ ಸೆಷನ್ಸ್ ನ್ಯಾಯಾಧೀಶ ಹರ್ದೀಪ್ ಕೌರ್ ಹೇಳಿದ್ದಾರೆ.

ಪ್ರಸ್ತುತ ಪ್ರಕರಣದ ತನಿಖೆಯು ಆರಂಭಿಕ ಹಂತದಲ್ಲಿದೆ. ಆರೋಪಿಯ ವಿರುದ್ಧದ ಆರೋಪಗಳು ಗಂಭೀರ ಸ್ವರೂಪದ್ದಾಗಿದೆ, ಏಕೆಂದರೆ ಆಕೆ ಇತರ ಸಹ–ಆರೋಪಿಗಳೊಂದಿಗೆ ಭಾರತದ ಸಾರ್ವಭೌಮತೆ ಮತ್ತು ಸಮಗ್ರತೆಯನ್ನು ಅಡ್ಡಿಪಡಿಸುವಲ್ಲಿ ಭಾಗಿಯಾಗಿದ್ದಾಳೆ. ತನಿಖೆ ಆರಂಭಿಕ ಹಂತದಲ್ಲಿರುವುದರಿಂದ ಜಾಮೀನು ನೀಡಲು ಸೂಕ್ತವಲ್ಲ ಎಂದರು.

ಅರ್ಜಿದಾರರ ವಿರುದ್ಧ ಹೊರಿಸಲಾದ ಆರೋಪಗಳ ಗಂಭೀರತೆ ಮತ್ತು ತನಿಖೆಯ ಆರಂಭಿಕ ಹಂತವನ್ನು ಪರಿಗಣಿಸಿ, ಜಾಮೀನಿನ ಮೇಲೆ ಆರೋಪಿ ಬಿಡುಗಡೆ ಮಾಡಲು ಸೂಕ್ತ ಪ್ರಕರಣವೆಂದು ನನಗೆ ಕಂಡುಬಂದಿಲ್ಲ. ಪ್ರಸ್ತುತ ಜಾಮೀನು ಅರ್ಜಿಯನ್ನು ವಜಾಗೊಳಿಸಲಾಗಿದೆ ಎಂದು ನ್ಯಾಯಾಧೀಶರು ಹೇಳಿದರು.

## ನದಿಯಲ್ಲಿ ಮುಳುಗಿ ಮೂವರು ಅಯ್ಯಪ್ಪ ಮಾಲಾಧಾರಿಗಳ ಸಾವು



ನಂಜನಗೂಡು: ಪಟ್ಟಣದ ಕಪಿಲ ನದಿಯಲ್ಲಿ ಶುಕ್ರವಾರ ಬೆಳಿಗ್ಗೆ ಸ್ನಾನಕ್ಕೆಂದು ಇಳಿದಿದ್ದ ಅಯ್ಯಪ್ಪ ಮಾಲಾಧಾರಿಗಳು ನೀರಿನಲ್ಲಿ ಮುಳುಗಿ ಮೃತಪಟ್ಟಿದ್ದಾರೆ.

ಮೃತರನ್ನು ತುಮಕೂರು ಮೂಲದ ಗವಿ ರಂಗ(19), ರಾಕೇಶ್(19) ಹಾಗೂ ಅಪ್ಪು(16) ಎಂದು ಗುರುತಿಸಲಾಗಿದೆ. ಅಯ್ಯಪ್ಪ ಸ್ವಾಮಿ ದರ್ಶನ ಪಡೆದ ಐವರು ಗುರುವಾರ ತಡರಾತ್ರಿ ಇಲ್ಲಿನ ನಂಜುಂಡೇಶ್ವರನ ದರ್ಶನಕ್ಕೆ ಬಂದಿದ್ದರು. ಶುಕ್ರವಾರ ಬೆಳಿಗ್ಗೆ ಸ್ನಾನಕ್ಕೆಂದು ನದಿಗೆ ಇಳಿದಿದ್ದಾರೆ. ಇಬ್ಬರು ಈಜಿ ಮೇಲೆ ಬಂದಿದ್ದಾರೆ ಎನ್ನಲಾಗಿದೆ.

ಪಟ್ಟಣದ ಅಗ್ನಿಶಾಮಕ ಠಾಣೆಯ ಸಿಬ್ಬಂದಿ ಮೃತದೇಹಗಳನ್ನು ಹೊರ ತೆಗೆಯುವ ಕಾರ್ಯಾಚರಣೆಯಲ್ಲಿ ತೊಡಗಿದ್ದಾರೆ. ಶಾಸಕ ದರ್ಶನ್ ಧ್ರುವನಾರಾಯಣ ಸ್ಥಳಕ್ಕೆ ಭೇಟಿ ನೀಡಿದ್ದರು. ನಂಜನಗೂಡು ಪಟ್ಟಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಬೆಳಗಾವಿ ವರದಿ

SATURDAY, 20 JANUARY 2024

# ಪ್ರಯಾಣಿಕರಿಗೆ ಅಗತ್ಯ ಬಸ್ ಸಂಚಾರದ ವ್ಯವಸ್ಥೆ: ಸಚಿವ ಸತೀಶ್ ಜಾರಕಿಹೊಳಿ



ಹುಕ್ಕೇರಿ ತಾಪಂ ಸಭಾಭವನದಲ್ಲಿ ನಡೆದ ಸಾರ್ವಜನಿಕರ ಕುಂದುಕೊರತೆ ಸಭೆ

ಹುಕ್ಕೇರಿ: ತಾಲೂಕಿನ ಯಮಕನಮರಡಿ ಕ್ಷೇತ್ರ ವ್ಯಾಪ್ತಿಯಲ್ಲಿ ಈಗಾಗಲೇ ಪ್ರಯಾಣಿಕರಿಗೆ ಅಗತ್ಯ ಬಸ್ ಸೇವೆ ಒದಗಿಸಲು ಪ್ರಯತ್ನಿಸಲಾಗುತ್ತಿದ್ದು ಬರುವ ಫೆಬ್ರುವರಿ ತಿಂಗಳಿನಿಂದ ಇನ್ನಷ್ಟು ನೂತನ ಮಾರ್ಗಗಳಲ್ಲಿ ಬಸ್ ಸಂಚಾರ ವ್ಯವಸ್ಥೆ ಕಲ್ಪಿಸಲಾಗುವುದು ಎಂದು ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಹೇಳಿದರು.

ಇಲ್ಲಿನ ತಾಲೂಕು ಪಂಚಾಯಿತಿ ಸಭಾಭವನದಲ್ಲಿ ಶುಕ್ರವಾರ ನಡೆದ ಸಾರ್ವಜನಿಕರ ಕುಂದುಕೊರತೆ ಸಭೆಯಲ್ಲಿ ಮಾತನಾಡಿದ ಅವರು, ಪ್ರಯಾಣಿಕರು, ಶಾಲಾ-ಕಾಲೇಜು ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಅಗತ್ಯ ಬಸ್ ಸಂಚಾರ ಒದಗಿಸಲಾಗುವುದು ಎಂದರು.

ಕೋಚರಿ, ರಾಜಕಟ್ಟಿ, ದಡ್ಡಿ, ಮಾರಣಹೋಳ, ಉಳ್ಳಾಗಡ್ಡಿ ಖಾನಾಪುರ, ಯಮಕನಮರಡಿ ಸೇರಿದಂತೆ ಮತ್ತಿತರ ಮಾರ್ಗಗಳಲ್ಲಿ ಬಸ್‌ಗಳ ಸಂಚಾರ ಕೊರತೆಯಿದೆ ಎಂಬ ದೂರುಗಳಿವೆ. ಹಾಗಾಗಿ ಈ ಮಾರ್ಗಗಳಲ್ಲಿ ಸಂಬಂಧಿಸಿದ ಡಿಪೋದಿಂದ ಅಗತ್ಯ ಬಸ್‌ಗಳ ಓಡಾಟ ಆರಂಭಿಸಬೇಕು. ಬರುವ ಫೆಬ್ರುವರಿ ತಿಂಗಳಲ್ಲಿ ಪ್ರತಿ ಡಿಪೋಗೆ 10 ಹೊಸ ಬಸ್‌ಗಳು ಬರಲಿದ್ದು ಮತ್ತಷ್ಟು ಬಸ್ ಸೇವೆ ವಿಸ್ತರಿಸಲು ಸಹಕಾರಿಯಾಗಲಿದೆ ಎಂದು ಅವರು ಹೇಳಿದರು.

ಜಲಜೀವನ ಮಿಷನ್ (ಜೆಜೆಎಂ) ಅಡಿ ಕೈಗೆತ್ತಿಕೊಂಡಿರುವ ಕಾಮಗಾರಿಗಳಲ್ಲಿ ತಾಂತ್ರಿಕ ದೋಷವಿದ್ದು ಬಹುತೇಕ ಕಡೆಗಳಲ್ಲಿ ಅವೈಜ್ಞಾನಿಕವಾಗಿ ಕೆಲಸ ಮಾಡಲಾಗಿದೆ ಎಂಬ ಗಂಭೀರ ದೂರುಗಳು ಕೇಳಿ ಬಂದಿವೆ. ಈ ನಿಟ್ಟಿನಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಅಧಿಕಾರಿಗಳು ಸಂಬಂಧಿಸಿದ ಗುತ್ತಿಗೆದಾರರಿಂದ ನಿಗದಿತ ಅವಧಿಯೊಳಗೆ ಗುಣಮಟ್ಟದ ಕಾಮಗಾರಿ ಮಾಡಿಸಬೇಕು ಎಂದು ಅವರು ಸೂಚಿಸಿದರು.

ಬಳಿಕ ತಾಲೂಕಿನ ವಿವಿಧ ಗ್ರಾಮಗಳ ಜನರ ಅಹವಾಲು, ಕುಂದುಕೊರತೆ ಆಲಿಸಿದ ಸಚಿವರು, ಕೂಡಲೇ ಅವುಗಳನ್ನು ಪರಿಹರಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರೂ ಆದ ತಾಪಂ ಆಡಳಿತಾಧಿಕಾರಿ ಬಬಲಿ, ತಹಶೀಲ್ದಾರ ಮಂಜುಳಾ ನಾಯಕ, ತಾಪಂ ಇಒ ಪ್ರವೀಣ ಕಟ್ಟಿ, ಮ್ಯಾನೇಜರ ಅವಿನಾಶ ಹೊಳೆಪ್ಪಗೋಳ, ಕಾಂಗ್ರೆಸ್ ಜಿಲ್ಲಾಧ್ಯಕ್ಷ ವಿನಯ ನಾವಲಗಟ್ಟಿ, ಮುಖಂಡರಾದ ರವೀಂದ್ರ ಜಿಂಡ್ರಾಳಿ, ಇಲಿಯಾಸ ಇನಾಮದಾರ, ಕಿರಣ ರಜಪೂತ, ದಯಾನಂದ ಪಾಟೀಲ, ವೃಷಭ ಪಾಟೀಲ, ಬಸವರಾಜ ಕೋಳಿ, ಆನಂದ ತವಗಮಠ, ಅಕ್ಷಯ ವೀರಮುಖ ಮತ್ತಿತರರು ಉಪಸ್ಥಿತರಿದ್ದರು.

# ವಿಶೇಷ ಚೇತನ ವಿದ್ಯಾರ್ಥಿಗೆ ಡಾ.ಪ್ರಭಾಕರ ಕೋರೆ ಪ್ರೋತ್ಸಾಹ



ಬೆಳಗಾವಿ: ವಿಶೇಷ ಚೇತನ ವಿದ್ಯಾರ್ಥಿಯಾಗಿರುವ ಶಿವಾನಂದ ಸುಂಕದನಿಗೆ ಕೆಎಲ್‌ಇ ಸಂಸ್ಥೆಯ ಕಾರ್ಯಾಧ್ಯಕ್ಷರಾದ ಡಾ.ಪ್ರಭಾಕರ ಕೋರೆಯವರು ಲ್ಯಾಪ್‌ಟಾಪ್‌ನ್ನು ನೀಡುವ ಮೂಲಕ ಪ್ರೋತ್ಸಾಹಿಸಿದ್ದಾರೆ.

ಗದಗದಬಡರೈತನ ಮಗನಾಗಿರುವ ಶಿವಾನಂದ ಸುಂಕದಬಾಲ್ಯದಲ್ಲಿ ಯೇಪೋಲೀಯೊದಿಂದಎರಡು ಕಾಲುಗಳನ್ನು ಕಳೆದುಕೊಂಡು, ಆದರೆಜಾಣ ವಿದ್ಯಾರ್ಥಿ ಶಿವಾನಂದ ಅತ್ಯಂತಕಷ್ಟದಲ್ಲಿಯೇ ಅಂಗ ವೈಕ್ಯಲ್ಯತೆಯನ್ನು ಸವಾಲನ್ನಾಗಿ ಸ್ವೀಕರಿಸಿ ಸಾಧನೆಯನ್ನು ಮಾಡಿದವನು.

ಗದಗದಲ್ಲಿರುವ ಕೆಎಲ್‌ಇ ಸಂಸ್ಥೆಯ ಜಗದ್ಗುರು ತೋಂಟದಾರ್ಯ ಮಹಾವಿದ್ಯಾಲಯದಲ್ಲಿ ಬಿ.ಕಾಂ. ಪದವಿಯನ್ನು ಪೂರೈಸಿರುವ ಶಿವಾನಂದ ಸದ್ಯಧಾರವಾಡದ ಸರ್ ಸಿದ್ದಪ್ಪ ಕಂಬಳಿ ಕಾನೂನು ಮಹಾ ವಿದ್ಯಾಲಯದಲ್ಲಿ ಮೊದಲ ಸೆಮಿಸ್ಟರ್ ಕಾನೂನು ಪದವಿಯನ್ನು ಓದುತ್ತಿದ್ದಾನೆ.

ಕಲಿಕೆಯಲ್ಲಿಯರುವ ಅವನ ಆಸಕ್ತಿ ಹಾಗೂ ಹುಮ್ಮಸ್ಸುಗಳನ್ನು ಗುರುತಿಸಿ ಡಾ.ಕೋರೆಯವರು ಇಂತಹ ವಿದ್ಯಾರ್ಥಿಗಳು ಸಮಾಜದ ಸಂಖ್ಯ ಮಕ್ಕಳಿಗೆ ಪ್ರೇರಕರಾಗಿದ್ದಾರೆ.

ಓದಿಗೆ ಹಾಗೂ ಸಾಧನೆಗೆ ಅಂಗವೈಕ್ಯಲ್ಯತೆ ಅಡ್ಡಿಯಾಗಲಾರದು ಎಂದು ಹೇಳುವ ಮೂಲಕ ಶಿವಾನಂದನ ಇಷ್ಟದಂತೆಯೆ ಲ್ಯಾಪ್‌ಟಾಪ್‌ನ್ನು ಕೊಡ ಮಾಡಿಕಲಿಕೆಗೆ ಪ್ರೋತ್ಸಾಹಿಸಿದ್ದಾರೆ.

# 22ಕ್ಕೆ ನವನಗರ ರಾಮ ಮಂದಿರ ಕಳಸಾರೋಹಣ




ಹುಬ್ಬಳ್ಳಿ: ನವನಗರ ಬ್ರಾಹ್ಮಣ ಸೇವಾ ಸಂಘದ ವತಿಯಿಂದ ನವನಗರದ ಪಂಚಾಕ್ಷರಿ ನಗರ ಬಸವಾ ಎಸ್ಟೇಟ್‌ದಲ್ಲಿರುವ ಶ್ರೀರಾಮ ಮಂದಿರದ ಕಳಸಾರೋಹಣವನ್ನು ದಿ.22 ರಂದು ಬೆ. 11.20ಕ್ಕೆ ಹಮ್ಮಿಕೊಳ್ಳಲಾಗಿದೆ ಎಂದು ಬ್ರಾಹ್ಮಣ ಸೇವಾ ಸಂಘದ ಉಪಾಧ್ಯಕ್ಷ ನರೇಂದ್ರ ಕುಲಕರ್ಣಿ ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಕಾರ್ಯಕ್ರಮದ ವಿವರ ನೀಡಿದ ಅವರು, ಚಿಕ್ಕಮಗಳೂರಿನ ಶ್ರೀ ಕ್ಷೇತ್ರ ಶಕಟಪುರದ ವಿದ್ಯಾಭಿನವ ಶ್ರೀ ಕೃಷ್ಣಾನಂದತೀರ್ಥ ಮಹಾಸ್ವಾಮಿಗಳು ಕಾರ್ಯಕ್ರಮಕ್ಕೆ ಚಾಲನೆ ನೀಡಲಿದ್ದಾರೆಂದರು.

21ರಂದು ಮಧ್ಯಾಹ್ನ 3-30 ಗಂಟೆಗೆ ಮುಖ್ಯದ್ವಾರದ ಮಾರುತಿ ಮಂದಿರದಿಂದ ಭವ್ಯ ಶೋಭಾಯಾತ್ರೆ ಹಮ್ಮಿಕೊಳ್ಳಲಾಗಿದ್ದು, ಕೃಷ್ಣಾನಂದತೀರ್ಥ ಮಹಾಸ್ವಾಮಿಗಳು ಚಾಲನೆ ನೀಡಲಿದ್ದಾರೆಂದರು.

22 ರಂದು ಬೆ.11.20ಕ್ಕೆ ಕಳಸಾರೋಹಣ ನಡೆಯಲಿದ್ದು,ಸಾಯಂಕಾಲ 6.30 ಕ್ಕೆ ದೀಪೋತ್ಸವ ಜರುಗಲಿದೆ.

ಬೆ.11.30ಕ್ಕೆ ಶ್ರೀರಾಮ ಸಮುದಾಯ ಭವನದಲ್ಲಿ ಸಭಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಕೃಷ್ಣಾನಂದತೀರ್ಥ ಶ್ರೀಗಳು, ಬ್ರಹ್ಮಶ್ರೀ ರಾಜೇಶ್ವರ ಶಾಸ್ತ್ರಿಗಳು, ಮಧುಸೂದನ್ ಶಾಸ್ತ್ರೀಗಳು, ಕೇಂದ್ರ ಸಚಿವ ಪ್ರಹ್ಲಾದ ಜೋಶಿ, ವಿಧಾನಸಭೆ ವಿರೋಧ ಪಕ್ಷದ ಉಪ ನಾಯಕ ಅರವಿಂದ್ ಬೆಲ್ಲದ್ ಉಪಸ್ಥಿತರಿರುವರು. ನವನಗರ ಬ್ರಾಹ್ಮಣ ಸೇವಾ ಸಂಘದ ಅಧ್ಯಕ್ಷ ಸತೀಶ್ ದೀಕ್ಷೀತ್ ಅಧ್ಯಕ್ಷತೆ ವಹಿಸಲಿದ್ದಾರೆ ಎಂದರು.

ಅಂದು ಅಯೋಧ್ಯೆಯಲ್ಲಿ ಶ್ರೀರಾಮನ ಪ್ರತಿಷ್ಠಾಪನಾ ಕಾರ್ಯಕ್ರಮದ ನೇರಪ್ರಸಾರ ದೊಡ್ಡ ಪರದೆಯ ಮೇಲೆ ತೋರಿಸುವ ವ್ಯವಸ್ಥೆ ಸಹ ಮಾಡಲಾಗಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಸತೀಶ ಮೂರೂರ, ಶ್ರೀಧರ ದೇಶಪಾಂಡೆ, ಗಿರೀಶ್ ನಾಡಗೇರ್, ಕಲ್ಯಾಣರಾವ್ ಜೋಶಿ, ಗಿರೀಶ ಸವಡಿ ಜೋಶಿ ಉಪಸ್ಥಿತರಿದ್ದರು.

# ವಿದ್ಯುತ್ ಹರಿವು: ಸಾರ್ವಜನಿಕರಿಗೆ ಎಚ್ಚರಿಕೆ

ಬೆಳಗಾವಿ: ಕ.ವಿ.ಪ್ರ.ನಿ.ನಿ. ವತಿಯಿಂದ ನಾಲ್ಕನೇಯ ತ್ರೈಮಾಸಿಕ ಹಾಗೂ ತುರ್ತು ನಿರ್ವಹಣಾ ಕಾರ್ಯಗಳನ್ನು ಕೈಗೊಳ್ಳುತ್ತಿರುವುದರಿಂದ ಜ.21 ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 5 ಗಂಟೆಯವರೆಗೆ 110 ಕೆ.ವ್ಹಿ. ಮಚ್ಛೆ ಉಪಕೇಂದ್ರದಿಂದ ಸರಬರಾಜು ಬೆಳಗಾವಿ ತಾಲೂಕಿನ ದತ್ತ ನಗರ, ನಾವಗೇಕರ ನಗರ, ಹವಳ ನಗರ, ಗೋಡಸೆ ಕಾಲನಿ, ಓಂಕಾರ ನಗರ, ಮಚ್ಛೆ, ಝಾಡಶಾಪೂರ, ದೇಸೂರ, ಸುಸ್ಗ್ಯಾನಟ್ಟಿ, ಬಳಗಾಮಟ್ಟಿ, ಕುಟ್ಟಲವಾಡಿ, ಬಾಮನವಾಡಿ, ನಾವಗೆ, ಜಾನೇವಾಡಿ, ಬಾದರವಾಡಿ, ರಣಕುಂಡೆ, ಕರ್ಲೇ, ಕಿನಯೇ, ಸಂತಿ ಬಸ್ತವಾಡ, ಕಾಳೇನಟ್ಟಿ, ವಾಘವಾಡೆ, ರಂಗಧೋಳಿ, ಪೀರಣವಾಡಿ, ಖಾದರವಾಡಿ, ಮಾರ್ಕಂಡೇಯ ನಗರ, ವಾಲ್ಮೀಕಿ ನಗರ, ತೀರ್ಥಕುಂಡೆ, ಹುಂಚ್ಯಾನಟ್ಟಿ, ಅಶೋಕ ಐರನ್ ಕಾಲನಿ, ನಾವಗೆ, ವಾಘವಾಡೆ ಹಾಗೂ ಮಚ್ಛೆ ಔದ್ಯೋಗಿಕ ಕ್ಷೇತ್ರಗಳಿಗೆ ಹಾಗೂ ಖಾನಾಪೂರ ತಾಲೂಕಿನ ಉಚವಡಾ, ಕುಸಮಳಿ, ಬೈಲೂರ, ಮೊರಬ, ಜಾಂಬೋಟಿ, ಓಲಮನಿ, ವಡಗಾಂವ, ದಾರೋಳಿ, ಚಾಪೋಲಿ, ಕಾಪೋಲಿ, ಮುಡವಿ, ಹಬ್ಬಾನಟ್ಟಿ, ದೇವಾಚಿಹಟ್ಟಿ, ತೋರಾಳಿ, ಗೋಲ್ಯಾಳಿ, ಬೆಟಗೇರಿ, ತಳೇವಾಡಿ, ಅಮಟೆ, ಕಾಲಮನಿ, ಚಿಕಲೆ, ಕಣಕುಂಬಿ, ಗವಸೆ, ಅಮಗಾಂವ, ಬೇಟ್ನೆ, ಪಾರವಾಡ, ಚಿಗುಳೆ, ಮಾನ, ಸಡಾ, ಚೋರ್ಲಾ, ಹಳೆ ಹಾಗೂ ಹೊಸ ಹುಳಂದ ಗ್ರಾಮಗಳಿಗೆ ನೀರಾವರಿ ಪಂಪ್‌ಸೆಟ್‌ಗಳ ಏರಿಯಾಗಳಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಬೆಳಗಾವಿಯ ಹುವಿಸಕಂನಿ ಕಾ ಮತ್ತು ಪಾ ಗ್ರಾಮೀಣ ವಿಭಾಗ, ಕಾರ್ಯನಿರ್ವಾಹಕ ಇಂಜಿನೀಯರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆರ್.ಪಿ.ಡಿ ಮಹಾವಿದ್ಯಾಲಯದಲ್ಲಿ ವಿದ್ಯಾರ್ಥಿ, ಪಾಲಕರು ಹಾಗೂ ಮಾರ್ಗದರ್ಶಕರ ಸಭೆ

ಬೆಳಗಾವಿ: ನಗರದ ಪ್ರತಿಷ್ಠಿತ ಎಸ್. ಕೆ. ಇ. ಸಂಸ್ಥೆಯ ಆರ್. ಪಿ. ಡಿ. ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ಕೆ. ಎಂ. ಗಿರಿ ಸಭಾಂಗಣದಲ್ಲಿ ದಿನಾಂಕ 21-01-2024 ರಂದು ರವಿವಾರ ಬೆಳಗಿನ 10 ಗಂಟೆಗೆ ವಿದ್ಯಾರ್ಥಿ, ಪಾಲಕರು ಹಾಗೂ ಮಾರ್ಗದರ್ಶಕರ ಸಭೆಯನ್ನು ಕರೆಯಲಾಗಿದೆ. ಸಭೆಯಲ್ಲಿ ವಿದ್ಯಾರ್ಥಿಗಳ ಸರ್ವಾಂಗೀಣ ಅಭಿವೃದ್ಧಿಗೆ ಸಂಬಂಧಿಸಿ ಪಾಲಕ ಹಾಗೂ ವಿದ್ಯಾರ್ಥಿ ಮಾರ್ಗದರ್ಶಕರ ನಡುವೆ ಸಂವಾದ ನಡೆಸಲಾಗುತ್ತದೆ.ಅಲ್ಲದೇ ಮಹಾವಿದ್ಯಾಲಯದ ಮೂಲಕ ವಿದ್ಯಾರ್ಥಿಗಳಿಗೆ ದೊರೆಯುವ ಸೌಲಭ್ಯಗಳು, ವಿದ್ಯಾರ್ಥಿಗಳ ಭವಿಷ್ಯತ್ತಿನ ಬೆಳವಣಿಗೆಯ ಕುರಿತು ಮಹಾವಿದ್ಯಾಲಯದ ಯೋಜನೆಗಳು ಮೊದಲಾದ ವಿಷಯಗಳ ಕುರಿತು ಚರ್ಚೆ ನಡೆಸಲಾಗುವುದು ಎಂದು ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ. ಅಭಯ ಪಾಟೀಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಾಳೆ ವಿದ್ಯುತ್ ನಿಲುಗಡೆ

ಬೆಳಗಾವಿ: ದಿನಾಂಕ 21.01.2024 ರಂದು ಬೆಳಿಗ್ಗೆ 10.00 ಘಂಟೆಯಿಂದ ಸಾಯಂಕಾಲ 05.00 ಘಂಟೆಯವರೆಗೆ ಕ.ವಿ.ಪ್ರ.ನಿ.ನಿ. ವತಿಯಿಂದ ನಾಲ್ಕನೇಯ ತ್ರೈಮಾಸಿಕ ಹಾಗೂ ಇತರೆ ತುರ್ತು ನಿರ್ವಹಣಾ ಕಾರ್ಯಗಳನ್ನು ಕೈಗೊಳ್ಳುತ್ತಿರುವುದರಿಂದ 110 ಕೆ.ವ್ಹಿ. ಮಚ್ಛೆ ಉಪಕೇಂದ್ರದಿಂದ ಸರಬರಾಜು ಆಗುವ ಬೆಳಗಾವಿ ತಾಲೂಕಿನ ದತ್ತ ನಗರ, ನಾವಗೇಕರ ನಗರ, ಹವಳ ನಗರ, ಗೋಡಸೆ ಕಾಲನಿ, ಓಂಕಾರ ನಗರ, ಮಚ್ಛೆ, ಝಾಡಶಾಪೂರ, ದೇಸೂರ, ಸುಸ್ಗ್ಯಾನಟ್ಟಿ, ಬಳಗಾಮಟ್ಟಿ, ಕುಟ್ಟಲವಾಡಿ, ಬಾಮನವಾಡಿ, ನಾವಗೆ, ಜಾನೇವಾಡಿ, ಬಾದರವಾಡಿ, ರಣಕುಂಡೆ, ಕರ್ಲೇ, ಕಿನಯೇ, ಸಂತಿ ಬಸ್ತವಾಡ, ಕಾಳೇನಟ್ಟಿ, ವಾಘವಾಡೆ, ರಂಗಧೋಳಿ, ಪೀರಣವಾಡಿ, ಖಾದರವಾಡಿ, ಮಾರ್ಕಂಡೇಯ ನಗರ, ವಾಲ್ಮೀಕಿ ನಗರ, ತೀರ್ಥಕುಂಡೆ, ಹುಂಚ್ಯಾನಟ್ಟಿ, ಅಶೋಕ ಐರನ್ ಕಾಲನಿ, ನಾವಗೆ, ವಾಘವಾಡೆ ಹಾಗೂ ಮಚ್ಛೆ ಔದ್ಯೋಗಿಕ ಕ್ಷೇತ್ರಗಳಿಗೆ ಹಾಗೂ ಖಾನಾಪೂರ ತಾಲೂಕಿನ ಉಚವಡಾ, ಕುಸಮಳಿ, ಬೈಲೂರ, ಮೊರಬ, ಜಾಂಬೋಟಿ, ಓಲಮನಿ, ವಡಗಾಂವ, ದಾರೋಳಿ, ಚಾಪೋಲಿ, ಕಾಪೋಲಿ, ಮುಡವಿ, ಹಬ್ಬಾನಟ್ಟಿ, ದೇವಾಚಿಹಟ್ಟಿ, ತೋರಾಳಿ, ಗೋಲ್ಯಾಳಿ, ಬೆಟಗೇರಿ, ತಳೇವಾಡಿ, ಅಮಟೆ, ಕಾಲಮನಿ, ಚಿಕಲೆ, ಕಣಕುಂಬಿ, ಗವಸೆ, ಅಮಗಾಂವ, ಬೇಟ್ನೆ, ಪಾರವಾಡ, ಚಿಗುಳೆ, ಮಾನ, ಸಡಾ, ಚೋರ್ಲಾ, ಹಳೆ ಹಾಗೂ ಹೊಸ ಹುಳಂದ ಗ್ರಾಮಗಳಿಗೆ ಹಾಗೂ ಸದರಿ ಗ್ರಾಮಗಳ ನೀರಾವರಿ ಪಂಪ್‌ಸೆಟ್‌ಗಳ ಏರಿಯಾಗಳಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂಬ ವಿಷಯವನ್ನು ಸಾರ್ವಜನಿಕ ಹಿತದೃಷ್ಠಿಯಿಂದ ಪತ್ರಿಕಾ ಪ್ರಕಟಣೆ ನೀಡುವಂತೆ ಈ ಮೂಲಕ ವಿನಂತಿಸಲಾಗಿದೆ.

# ವಿವಿಧ ಹುದ್ದೆಗಳಿಗೆ ಅರ್ಜಿ ಆಹ್ವಾನ

ಮಂಗಳೂರು: ಮಿಷನ್ ಶಕ್ತಿ ಯೋಜನೆಯಡಿ ಜಿಲ್ಲಾ ಮಹಿಳಾ ಸಬಲೀಕರಣ ಘಟಕಕ್ಕೆ ಹೊರಗುತ್ತಿಗೆ ಆಧಾರದ ಮೇರೆಗೆ ವಿವಿಧಢ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಜಿಲ್ಲಾ ಮಿಷನ್ ಸಂಯೋಜಕರ ಹುದ್ದೆ: ಸಮಾಜ ವಿಜ್ಞಾನ, ಜೀವ ವಿಜ್ಞಾನ, ಪೌಷ್ಟಿಕ, ವೈದ್ಯಕೀಯ, ಆರೋಗ್ಯ ನಿರ್ವಹಣೆ, ಸಮಾಜ ಕಾರ್ಯ ಹಾಗೂ ಗ್ರಾಮೀಣ ನಿರ್ವಹಣೆಗಳಲ್ಲಿ ಪದವಿ ಹೊಂದಿದ್ದು ಸರಕಾರಿ ಅಥವಾ ಸ್ವಯಂ ಸೇವಾ ಸಂಸ್ಥೆಗಳಲ್ಲಿ ಕನಿಷ್ಠ 3 ವರ್ಷ ಅನುಭವ ಹೊಂದಿರಬೇಕು.

ಆರ್ಥಿಕ ಸಾಕ್ಷರತೆ ತಜ್ಞರ ಮತ್ತು ಲೆಕ್ಕಿಗರ ಹುದ್ದೆ: ಅರ್ಥಶಾಸ್ತ್ರ/ಬ್ಯಾಂಕಿಂಗ್ ವಿಷಯಗಳಲ್ಲಿ ಪದವಿ ಹೊಂದಿದ್ದು ಸರಕಾರಿ ಅಥವಾ ಸ್ವಯಂ ಸೇವಾ ಸಂಸ್ಥೆಗಳಲ್ಲಿ ಕನಿಷ್ಠ 3 ವರ್ಷ ಅನುಭವ ಹೊಂದಿರಬೇಕು. ಸ್ನಾತಕೊತ್ತರ ಪದವಿದಾರರಿಗೆ ಆದ್ಯತೆ ನೀಡಲಾಗುವುದು.

ಅರ್ಹ ಅಭ್ಯರ್ಥಿಗಳು ಜ.25ರಂದು ಸಂಜೆ 5.30 ರೊಳಗೆ ಸೂಕ್ತ ದಾಖಲೆಗಳೊಂದಿಗೆ ಉಪನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, 2ನೇ ಮಹಡಿ, ಸ್ತ್ರೀಶಕ್ತಿ ಭವನ, ಮೆಸ್ಕಂ ಬಳಿ, ಬಿಜೈ ಮಂಗಳೂರು ಇಲ್ಲಿಗೆ ಅರ್ಜಿ ಸಲ್ಲಿಸಬಹುದು ಅವಧಿ ಮೀರಿ ಸಲ್ಲಿಸಿದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಂಗಾಂಗ ದಾನಿಗಳ ಸಂಖ್ಯೆ ಹೆಚ್ಚಾಗಲಿ



ಧಾರವಾಡ : ಸಶಕ್ತ ದೇಶ ನಿರ್ಮಾಣ ದಲ್ಲಿ ಯುವಕರ ಪಾತ್ರ ಬಹು ದೊಡ್ಡದಿದ್ದು, ಯುವಕರು ಹೆಚ್ಚಿನ ಪ್ರಮಾಣದಲ್ಲಿ ರಕ್ತದಾನ ಮಾಡುತ್ತಿದ್ದಾರೆ. ಅದರ ಜೊತೆಗೆ ಸಾವಿನ ನಂತರ ಕಣ್ಣುಗಳ ದಾನ ಮಾಡಲು ಮತ್ತು ಸಾವಿಗೆ ಮುನ್ನ ಅಂಗಾಗ ದಾನ ಮಾಡುವವರ ಸಂಖ್ಯೆ ಹೆಚ್ಚಾಗಬೇಕಿದೆ ಎಂದು ಯುವ ಉದ್ಯಮಿ ಹಾಗೂ ಜನಜಾಗೃತಿ ಸಂಘದ ಪ್ರಧಾನ ಕಾರ್ಯದರ್ಶಿ ರಾಘವೇಂದ್ರ ಶೆಟ್ಟಿ ಹೇಳಿದರು.

ಅವರು ಇಲ್ಲಿನ ಸಂಪಿಗೆ ನಗರ ರಸ್ತೆಯ ಬೇಂದ್ರೆ ನಗರ ಕ್ರಾಸ್ ಮೈದಾನದಲ್ಲಿ ಸಾಮಾಜಿಕ ಕಾರ್ಯಕರ್ತ ಬಸವರಾಜ ಕೊರವರ ಜನುಮ ದಿನದ ಪ್ರಯುಕ್ತ ಜನಜಾಗೃತಿ ಸಂಘ ಹಾಗೂ ಬಾಲನಂದನ ಟ್ರಸ್ಟ್ ಸಹಯೋಗದೊಂದಿಗೆ ಹಮ್ಮಿಕೊಂಡ ಬೃಹತ್ ರಕ್ತದಾನ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿದರು.

ಜನಜಾಗೃತಿ ಸಂಘದ ಉಪಾಧ್ಯಕ್ಷ ನಾಗರಾಜ ಕಿರಣಗಿ ಮಾತನಾಡಿ, ರಕ್ತದಾನದ ಬಗ್ಗೆ ಅನೇಕರಿಗೆ ತಪ್ಪು ತಿಳುವಳಿಕೆ ಇದೆ. ಇದರ ಬಗ್ಗೆ ಹೆಚ್ಚಾಗಿ ಅರಿವು ಮೂಡಿಸಬೇಕಿದೆ ಎಂದರು.

ಸಂಘದ ಅಧ್ಯಕ್ಷ ಬಸವರಾಜ ಕೊರವರ ಮಾತನಾಡಿ, ರಕ್ತದಾನ ಶಿಬಿರಕ್ಕೆ ಇಷ್ಟೊಂದು ಪ್ರಮಾಣದಲ್ಲಿ ಯುವಕರು ಸಹಕಾರ ನೀಡಿದ್ದಕ್ಕೆ ಧನ್ಯವಾದ ಸಲ್ಲಿಸಿದರು.

ಉದ್ಯಮಿ ತವನಪ್ಪ ಅಷ್ಟಗಿ, ಸುಮಾ ಕೊರವರ,. ಕರ್ನಾಟಕ ಕ್ಯಾನ್ಸರ್ ಆಸ್ಪತ್ರೆ ನವನಗರದ ಡಾ. ಉಮೇಶ ಹಳ್ಳಿಕೇರಿ, ಕೆಂಪೇಗೌಡ ಪಾಟೀಲ, ಆನಂದ ಪಾಟೀಲ, ಮಲ್ಲೇಶ ಅಂಬಿಗೇರ, ಬಸವಣ್ಣೆಪ್ಪ ಕಮತಿ, ಸಲೀಂ ಶೇಕ್, ಪ್ರಕಾಶ ರಾಠೋಡ, ದಯಾನಂದ ಬಡಿಗೇರ, ಅರುಣ ಮಠದ, ಲಾಲ್ ಸಾಬ ಅನೇಕರಿದ್ದರು.

# ರೈಲ್ವೆ ಜಾಗೆ ಹರಾಜು ಯತ್ನ: ಕೈ ಪ್ರತಿಭಟನೆ



ಹುಬ್ಬಳ್ಳಿ: ಇಲ್ಲಿನ ಕಾರವಾರ ರಸ್ತೆಯ ಎಂಟಿಎಸ್ ಕಾಲೊನಿಯಲ್ಲಿರುವ ರೈಲ್ವೆ ಇಲಾಖೆಗೆ ಸೇರಿದ ಕೋಟ್ಯಂತರ ಬೆಲೆ ಬಾಳುವ 13 ಎಕರೆ ಜಾಗವನ್ನು ಕಬಳಿಸಲು ಧಾರವಾಡ ಸಂಸದರು ಪ್ರಯತ್ನ ನಡೆಸಿದ್ದಾರೆ ಎಂದು ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಗುರುವಾರ ಪ್ರತಿಭಟನೆ ನಡೆಸಿದರು.

ಕಾಲೊನಿ ಎದುರು ಜಮಾಯಿಸಿದ ಮುಖಂಡರು ಹಾಗೂ ಕಾರ್ಯಕರ್ತರು, ಪ್ರಧಾನಿ ನರೇಂದ್ರ ಮೋದಿ, ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಹಾಗೂ ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಅವರ ಪ್ರತಿಕೃತಿ ದಹಿಸಿ, ಆಕ್ರೋಶ ವ್ಯಕ್ತಪಡಿಸಿದರು.

'ರೈಲ್ವೆ ಇಲಾಖೆಗೆ ಸೇರಿರುವ ಈ ಜಾಗವನ್ನು ಯಾರಿಗೂ ಗೊತ್ತಾಗದಂತೆ ಬಿಡಿಗಾಸಿಗೆ ಹರಾಜು ಹಾಕಲು ಷಡ್ಯಂತ್ರ ನಡೆಸಲಾಗುತ್ತಿದೆ. ಕೂಡಲೇ ಇದಕ್ಕೆ ತಡೆಯೊಡ್ಡಬೇಕು. ಈ ಷಡ್ಯಂತ್ರದ ಬಗ್ಗೆ ತನಿಖೆ ಕೈಗೊಳ್ಳಬೇಕು. ಸರ್ಕಾರಿ ಜಾಗ ಕಬಳಿಸಲು ನಾವು ಅವಕಾಶ ನೀಡುವುದಿಲ್ಲ' ಎಂದು

ಗ್ರಾಮೀಣ ಅಧ್ಯಕ್ಷ ಅನಿಲಕುಮಾರ ಪಾಟೀಲ ಹಾಗೂ ಮಹಾನಗರ ಜಿಲ್ಲಾ ಘಟಕದ ಅಧ್ಯಕ್ಷ ಅಲ್ತಾಫ ಹಳ್ಳೂರ ಹೇಳಿದರು. ಎಐಸಿಸಿ ಕಾರ್ಯದರ್ಶಿ ಮಯೂರ ಜಯಕುಮಾರ,ಮುಖಂಡರಾದ ಸದಾನಂದ ಡಂಗನವರ, ಸತೀಶ ಮೆಹರವಾಡೆ,ಶಿವಾ ನಾಯಕ, ಪಾರಸಮಲ್ ಜೈನ, ಮೊಹಮ್ಮದ ಕೋಳೂರ, ದೀಪಾ ನಾಗರಾಜ ಗೌರಿ,ಶಾಂತವ್ವ ಗುಜ್ಜಳ, ಶಾರೂಕ ಮುಲ್ಲಾ, ರವಿ ಬಡ್ನಿ, ಬುನಿಯನ್ ಸುರೇಶ ಸವಣೂರ ಸೇರಿದಂತೆ ನೂರಾರು ಪ್ರಮುಖರು, ಕಾರ್ಯಕರ್ತರು ಇದ್ದರು.

# ಜ.22 ರಂದೇ ಮಗು ಜನಿಸಬೇಕು ಎಂದು ಗರ್ಭಿಣಿಯರ ಪಟ್ಟು



ಅಯೋಧ್ಯೆ: ಜಗತ್ತಿನಾದ್ಯಂತ ಎಲ್ಲರ ಚಿತ್ತ ಜನವರಿ 22ರಂದು ಅಯೋಧ್ಯೆಯಲ್ಲಿ ಅದ್ದೂರಿಯಾಗಿ ನಡೆಯಲಿರುವ ರಾಮಮಂದಿರದ ಉದ್ಘಾಟನೆಯತ್ತ ಮೂಡಿದರೆ ಈ ಮಧ್ಯೆ ತಾಯ್ತನ ಆನಂದಿಸಲು ಎದುರುನೋಡುತ್ತಿರುವ ಗರ್ಭಿಣಿಯರು, ತಮಗೆ ಜನಿಸುವ ಮಗು ಜನವರಿ 22ರಂದೇ ಆಗಬೇಕು ಎಂದು ಪಟ್ಟು ಹಿಡಿದು ಕುಳಿತ್ತಿರುವುದು ಸದ್ಯ ವೈದ್ಯರಲ್ಲಿ ತೀವ್ರ ಗೊಂದಲ ಮೂಡಿಸಿದೆ.


ಜ.22ರಂದು ರಾಮಮಂದಿರದಲ್ಲಿ ನಡೆಯಲಿರುವ ರಾಮಲಲ್ಲಾ ವಿಗ್ರಹ ಪ್ರತಿಷ್ಠಾಪನೆಗೆ ಇದೀಗ ದಿನಗಣನೆ ಆರಂಭಗೊಂಡಿದ್ದು, ಇಡೀ ದೇಶವೇ ಶ್ರೀರಾಮನ ದರ್ಶನ ಪಡೆಯಲು ಎದುರುನೋಡುತ್ತಿದೆ. ಈ ಮಧ್ಯೆ ಭಕ್ತಾದಿಗಳು ದೇವಾಲಯಕ್ಕೆ ಸಂಬಂಧಿಸಿದಂತೆ ತಮ್ಮಿಂದ ಆಗುವ ಕೊಡುಗೆಗಳನ್ನು ಅರ್ಪಿಸುತ್ತ ಬರುತ್ತಿದ್ದು, ವಿಶೇಷ ರೀತಿಯಲ್ಲಿ ತಮ್ಮ ಭಕ್ತಿಯನ್ನು ತೋರುತ್ತಿದ್ದಾರೆ. ಅನೇಕರು ಜನವರಿ 22ರ ದಿನವನ್ನು ಬಹಳ ವಿಶೇಷ ಎಂದು ಪರಿಗಣಿಸಿದ್ದು, ಈ ದಿನವೇ ಬಹುಮುಖ್ಯ ಕೆಲಸಗಳನ್ನು ಈಡೇರಿಸಿಕೊಳ್ಳಲು ಯೋಜಿಸಿದ್ದಾರೆ.

ಆ ಪೈಕಿ ಗರ್ಭಿಣಿಯರು ಮುಂದಿದ್ದು, ತಮಗೆ ಜನಿಸುವ ಮಗುವಿನ ಜನನದ ದಿನ ಜ.22ರ ಹಿಂದೆ-ಮುಂದೆ ಇದ್ದರೂ ಅದನ್ನು ಲೆಕ್ಕಿಸದೇ ಬಲವಂತವಾಗಿ ಆದರೂ ಪರವಾಗಿಲ್ಲ ಅಯೋಧ್ಯೆಯಲ್ಲಿ ರಾಮಮಂದಿರ ವಿಗ್ರಹ ಸಮಾರಂಭದ ದಿನವೇ ನಮಗೆ ಮಗು ಜನಿಸುವಂತೆ ಹೆರಿಗೆ ಮಾಡಿ ಎಂದು ಪಟ್ಟು ಹಿಡಿದಿದ್ದಾರೆ. ಒಬ್ಬರು ಈ ರೀತಿ ಬೇಡಿಕೆಯಿಟ್ಟರೆ ವೈದ್ಯರು ಚಿಂತಿಸುತ್ತಿರಲಿಲ್ಲ. ಆದ್ರೆ, ಹಲವಾರು ಆಸ್ಪತ್ರೆಯಲ್ಲಿ ಇರುವ ಗರ್ಭಿಣಿಯರು ಇದೇ ಬಯಕೆಯನ್ನು ಹೇರಿದ್ದು, ವೈದ್ಯರು ಕಂಗಾಲಾಗಿದ್ದಾರೆ.

ಈ ಬೇಡಿಕೆಗಳನ್ನು ಈಡೇರಿಸಲು ನಿರಾಕರಿಸುತ್ತಿರುವ ವೈದ್ಯರು, ಗರ್ಭಿಣಿಯರಿಗೆ ನಿಗದಿಪಡಿಸಿರುವ ಡೆಲಿವರಿ ಡೇಟ್ಗೂ ಮುನ್ನ ಅಥವಾ ಮೀರಿದರೆ ತಾಯಿ ಹಾಗೂ ಮಗುವಿನ ಆರೋಗ್ಯಕ್ಕೆ ಭಾರೀ ತೊಂದರೆಯಾಗಬಹುದು ಎಂದು ಎಚ್ಚರಿಸಿದ್ದಾರೆ. ಇಷ್ಟೆಲ್ಲಾ ಹೇಳಿದರೂ ಕೂಡ ಹೆಚ್ಚಿನ ಸಂಖ್ಯೆಯ ಗರ್ಭಿಣಿಯರು ಪಟ್ಟು ಹಿಡಿದಿದ್ದು, ಏನೇ ಆಗಲಿ ಅದೇ ದಿನದಂದು ನಮಗೆ ಮಗು ಜನಿಸಬೇಕು ಎಂದು ತಿಳಿಸಿದ್ದಾರೆ.

ಇದೇನು ಹೊಸದಲ್ಲ ಎಂದು ಹೇಳುವ ವೈದ್ಯರು, ಇತ್ತೀಚಿನ ದಿನಗಳಲ್ಲಿ ಈ ರೀತಿಯ ಕೇಸ್‌ಗಳು ಹೆಚ್ಚುತ್ತಿವೆ. ನಿಗದಿಪಡಿಸಿರುವ ದಿನಗಳಿಗೆ ಹೋಲಿಸಿದರೆ, ಆ ದಿನ ಡೆಲಿವರಿ ಆಗುವ ಬದಲು ತಮ್ಮಿಷ್ಟದ ದಿನದಂದೇ ಮಗು ಜನಿಸುವಂತೆ ಮಾಡಿ ಎಂದು ಕುಟುಂಬಸ್ಥರು ಮನವಿ ಮಾಡುತ್ತಾರೆ. ಆದ್ರೆ, ಇದು ಎಲ್ಲರಿಗೂ ಸಾಧ್ಯವಿಲ್ಲ! ಕೆಲವು ಸಮಯ ಆಗುತ್ತದೆ. ಇನ್ನು ಕೆಲವೊಮ್ಮೆ ಯಾವುದೇ ಕಾರಣಕ್ಕೂ ಆಗುವುದಿಲ್ಲ. ಅದು ತಾಯಿ ಮತ್ತು ಮಗುವಿನ ಆರೋಗ್ಯದ ಮೇಲೆ ನಿರ್ಧಾರವಾಗುತ್ತದೆ ಎಂದು ಹೇಳಿದ್ದಾರೆ.

# ಯುವತಿ ನೇಣಿಗೆ ಶರಣು



ಶಿವಮೊಗ್ಗ: ಯುವತಿಯೊಬ್ಬಳು ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾದ ಘಟನೆ ತೀರ್ಥಹಳ್ಳಿಯ ಬಿಳುಕೊಪ್ಪ ಗ್ರಾಮದಲ್ಲಿ ನಡೆದಿದೆ.

ಮೃತ ವಿದ್ಯಾರ್ಥಿನಿಯನ್ನು ಅಧೀಕ್ಷಾ (20) ಎಂದು ಗುರುತಿಸಲಾಗಿದೆ. ಯುವತಿ ಬಾಳೆಬೈಲು ಕಾಲೇಜಿನಲ್ಲಿ ಅಂತಿಮ ವರ್ಷದ ಪದವಿ ವ್ಯಾಸಂಗ ಮಾಡ್ತಿದ್ದಳು. ಗುರುವಾರ ರಾತ್ರಿ ಮನೆಯಲ್ಲಿ ಯಾರೂ ಇಲ್ಲದ ವೇಳೆ ನೇಣಿಗೆ ಶರಣಾಗಿದ್ದಾಳೆ. ಬೆಳಗ್ಗೆ ಯುವತಿ ಹೊರಗೆ ಬರದೇ ಇದ್ದಿದ್ದರಿಂದ ಅನುಮಾನಗೊಂಡು ಬಾಗಿಲು ತೆರೆದು ನೋಡಿದಾಗ ಘಟನೆ ಬೆಳಕಿಗೆ ಬಂದಿದೆ.

ಈ ಸಂಬಂಧ ತೀರ್ಥಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ತೀರ್ಥಹಳ್ಳಿ ಸರ್ಕಾರಿ ಆಸ್ಪತ್ರೆಗೆ ರವಾನಿಸಿದ್ದಾರೆ. ಆತ್ಮಹತ್ಯೆಗೆ ನಿಖರ ಕಾರಣ ತಿಳಿದು ಬಂದಿಲ್ಲ. ಈ ಸಂಬಂಧ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

# ಸುಪ್ರೊ ಪ್ರಾಫಿಟ್ ಟ್ರಕ್ ಎಕ್ಸೆಲ್ ಪರಿಚಯಿಸಿದ ಮಹೀಂದ್ರಾ

ಹುಬ್ಬಳ್ಳಿ: ಭಾರತದಲ್ಲಿ ಸ್ಮಾಲ್ ಕಮರ್ಷಿಯಲ್ ವೆಹಿಕಲ್ಸ್ (ಎಸ್‌ಸಿವಿಗಳು) ಮಾರುಕಟ್ಟೆಯಲ್ಲಿ ಮುಂಚೂಣಿಯಲ್ಲಿರುವ ಮಹೀಂದ್ರಾ & ಮಹೀಂದ್ರಾ ಲಿಮಿಟೆಡ್ (ಎಂ&ಎಂ), ಡೀಸೆಲ್ ಮತ್ತು ಸಿಎನ್‌ಜಿ ಡ್ಯುಯೋ ವೇರಿಯಂಟ್‌ಗಳಲ್ಲಿ ಲಭ್ಯವಿರುವ ಹೊಸ ಸುಪ್ರೊ ಪ್ರಾಫಿಟ್ ಟ್ರಕ್ ಎಕ್ಸೆಲ್ ಸರಣಿಯ ಬಿಡುಗಡೆ ಘೋಷಿಸಿದೆ.

ಸುಪ್ರೊ ಪ್ಲಾಟ್‌ಫಾರ್ಮ್‌ನ ಯಶಸ್ಸಿನ ಆಧಾರದ ಮೇಲೆ ಪ್ರಾಫಿಟ್ ಟ್ರಕ್ ಎಕ್ಸೆಲ್ ಸರಣಿಯನ್ನು ಅದರ ಉನ್ನತ ಶಕ್ತಿ, ಅಸಾಧಾರಣ ಶೈಲಿ, ಸಾಟಿಯಿಲ್ಲದ ಸುರಕ್ಷತೆ ಮತ್ತು ಅತ್ಯುನ್ನತ ಸೌಕರ್ಯಗಳೊಂದಿಗೆ ಲಾಸ್ಟ್-ಮೈಲ್ ಸಂಪರ್ಕವನ್ನು ಮರು ವ್ಯಾಖ್ಯಾನಿಸುವಂತೆ ವಿನ್ಯಾಸಗೊಳಿಸಲಾಗಿದೆ.

ಸುಪ್ರೊ 2015ರಲ್ಲಿ ಬಿಡುಗಡೆಯಾಗಿದ್ದು, ಗ್ರಾಹಕರ ಅಗತ್ಯಗಳನ್ನು ಪೂರೈಸುವ ಬಹುಮುಖ ವಾಹನವಾಗಿದೆ. ಸುಪ್ರೊ ಪ್ರಾಫಿಟ್ ಟ್ರಕ್ ಎಕ್ಸೆಲ್ ಸರಣಿ ಡೀಸೆಲ್ ವೇರಿಯಂಟ್ ಬೆಲೆ ರೂ 6.61 ಲಕ್ಷ (ಎಕ್ಸ್ ಶೋ ರೂಂ ಬೆಂಗಳೂರು) ಮತ್ತು ಸಿಎನ್‌ಜಿ ಡ್ಯುಯೋ ವೇರಿಯಂಟ್ ಬೆಲೆ ರೂ 6.93 ಲಕ್ಷ (ಎಕ್ಸ್ ಶೋ ರೂಂ ಬೆಂಗಳೂರು) ಆಗಿದೆ. ಬ್ರಾಂಡ್‌ನ ವಾಲ್ಯೂಮ್ ನಲ್ಲಿ ಆರು ಪಟ್ಟು ಹೆಚ್ಚಳಕ್ಕೆ ಕಾರಣವಾದ ಸುಪ್ರೊ ಸಿಎನ್‌ಜಿ ಡ್ಯುಯೊ ಯಶಸ್ಸಿನ ನಂತರ, ಹೊಸ ಸುಪ್ರೊ ಪ್ರಾಫಿಟ್ ಟ್ರಕ್ ಎಕ್ಸೆಲ್ ಬಹು ಎಂಜಿನ್ ಮತ್ತು ಇಂಧನ ಆಯ್ಕೆಗಳು, ಆಧುನಿಕ ಶೈಲಿ, ಸುಧಾರಿತ ಸುರಕ್ಷತೆ ಮತ್ತು ತಂತ್ರಜ್ಞಾನ ವೈಶಿಷ್ಟ್ಯಗಳೊಂದಿಗೆ ರೂಪುಗೊಂಡಿದೆ.




ಮಹೀಂದ್ರಾ ಅಂಡ್ ಮಹೀಂದ್ರಾ ಲಿ.ನ ಆಟೋಮೋಟಿವ್ ಡಿವಿಷನ್ ಸಿಇಓ ನಳಿನಿಕಾಂತ್ ಗೊಲ್ಲಗುಂಟಾ ಮಾತನಾಡುತ್ತಾ, "ಮಹೀಂದ್ರಾದ 'ರೈಸ್ ಫಾರ್ ವ್ಯಾಲ್ಯೂ', ನಮ್ಮ ರೈಸ್ ಫಿಲಾಸಫಿಯ ಆಧಾರಸ್ತಂಭವಾಗಿದ್ದು, ಇದು ನಮ್ಮ ಹೊಸ ಕೊಡುಗೆಯಾದ - ಮಹೀಂದ್ರಾ ಸುಪ್ರೊ ಪ್ರಾಫಿಟ್ ಟ್ರಕ್ ಎಕ್ಸೆಲ್‌ನಲ್ಲಿ ಸಾಕಾರಗೊಂಡಿದೆ. ಈ ಬಿಡುಗಡೆಯು ಸಬ್-2-ಟನ್ ಸೆಗ್ಮೆಂಟ್ ನಲ್ಲಿ ಮಹತ್ವದ ಹೆಜ್ಜೆಯಾಗಿದ್ದು, ನಮ್ಮ ಬದ್ಧತೆಯನ್ನು ತೋರಿಸುತ್ತದೆ.

ಸುಪ್ರೊ ಪ್ರಾಫಿಟ್ ಟ್ರಕ್ ಎಕ್ಸೆಲ್, ಅದರ ಅಸಾಧಾರಣ 500 ಕಿಮೀ ರೇಂಜ್ ನ ಸಿಎನ್‌ಜಿ ಡ್ಯುಯೊ ವೇರಿಯಂಟ್‌ನೊಂದಿಗೆ, ಶಕ್ತಿ, ಆರ್ಥಿಕತೆ, ಸುರಕ್ಷತೆ ಮತ್ತು ಸೌಕರ್ಯವನ್ನು ಒದಗಿಸುತ್ತದೆ ಎಂದು ಹೇಳಿದ್ದಾರೆ.

ಎ&ಎಂನ ಆಟೋಮೋಟಿವ್ ಟೆಕ್ನಾಲಜಿ ಮತ್ತು ಪ್ರೊಡಕ್ಟ್ ಡೆಲವಪ್ಮೆಂಟ್ ಪ್ರೆಸಿಡೆಮಟ್ ಆರ್.ವೇಲುಸಾಮಿ ಮಾತನಾಡಿ, " ಸುಪ್ರೊ ಪ್ರಾಫಿಟ್ ಟ್ರಕ್ ಎಕ್ಸೆಲ್, ತಾಂತ್ರಿಕ ಶ್ರೇಷ್ಠತೆದೆಡೆಗಿನ ಮಹೀಂದ್ರಾದ ಅಚಲ ಬದ್ಧತೆಯನ್ನು ಉದಾಹರಿಸುತ್ತದೆ.

ಇದು ಸುಧಾರಿತ 5-ಸ್ಪೀಡ್ ಟ್ರಾನ್ಸ್ ಮಿಷನ್ ಹೊಂದಿದೆ, ಸ್ಟೆಬಿಲಿಟಿ ಹೆಚ್ಚಿಸಲು ಥಿಕ್ ನೆಸ್ ಜಾಸ್ತಿ ಮಾಡುವುದರೊಂದಿಗೆ ಚಾಸಿಸ್ ಬಲವರ್ಧಿಸಲಾಗಿದೆ ಮತ್ತು 19% ಹೆಚ್ಚು ಸ್ಟಿಫ್ ನೆಸ್ ನೀಡುತ್ತದೆ ಹಾಗೂ ಸುರಕ್ಷತೆಯಲ್ಲಿ ಹೊಸ ಮಾನದಂಡಗಳನ್ನು ಸ್ಥಾಪಿಸುವ ಆಂಟಿ-ರೋಲ್ ಬಾರ್ ಹೊಂದಿದೆ ಎಂದರು.

ಸುಪ್ರೊ ಪ್ರಾಫಿಟ್ ಟ್ರಕ್ ಎಕ್ಸೆಲ್ ತನ್ನ ಪ್ರಮುಖ ವೈಶಿಷ್ಟ್ಯಗಳೊಂದಿಗೆ ಎದ್ದು ಕಾಣುತ್ತದೆ. ಮೈಲೇಜ್, ಗಟ್ಟಿತನ, ಒರಟುತನ ಮತ್ತು ಬಹುರೀತಿಯ ಲೋಡ್‌ಗಳನ್ನು ಸಮರ್ಥವಾಗಿ ನಿಭಾಯಿಸುವ ಸಾಮರ್ಥ್ಯ ಹೊಂದಿದೆ. ಸುಪ್ರೊ ಪ್ರಾಫಿಟ್ ಟ್ರಕ್ ಎಕ್ಸೆಲ್ 5 ಸ್ಪೀಡ್ ಟ್ರಾನ್ಸ್ ಮಿಷನ್, 2050 ಎಂಎಂ ವೀಲ್‌ಬೇಸ್‌ಗೆ ಸ್ಥಿರತೆಯನ್ನು ಒದಗಿಸುವ ಆಂಟಿ-ರೋಲ್ ಬಾರ್‌ನೊಂದಿಗೆ ವರ್ಧಿತ ಸುರಕ್ಷತಾ ವೈಶಿಷ್ಟ್ಯದಿಂದ ಎದ್ದು ಕಾಣುತ್ತದೆ.

ಸುಪ್ರೊ ಎಕ್ಸೆಲ್ ಡೀಸೆಲ್ 23.6 ಕಿಮೀ/ಲೀ ಇಂಧನ ದಕ್ಷತೆಯನ್ನು ಹೊಂದಿದ್ದು, 105 ಎಲ್ ಸಾಮರ್ಥ್ಯದೊಂದಿಗೆ ಸುಪ್ರೊ ಎಕ್ಸೆಲ್ ಸಿಎನ್‌ಜಿ ಡ್ಯುಯೊ 24.8 ಕಿಮೀ/ಕೆಜಿ ನೀಡುತ್ತದೆ ಮತ್ತು 500 ಕಿಮೀಗಿಂತ ಹೆಚ್ಚು ಗಮನಾರ್ಹ ರೇಂಜ್ ಅನ್ನು ಹೊಂದಿದೆ.

ವಾಹನವು ಆರ್13 ಟೈರ್‌ಗಳನ್ನು ಹೊಂದಿದೆ ಮತ್ತು 208 ಎಂಎಂ ಗ್ರೌಂಡ್ ಕ್ಲಿಯರೆನ್ಸ್ ಹೊಂದಿದೆ,

# ಹುಕ್ಕೇರಿಯಲ್ಲಿ ವಿದ್ಯುತ್ ತಂತಿ, ಟಿಸಿ ಘಟಕ ಸ್ಥಾಪನೆಗೆ ಚಿಂತನೆ: ರಮೇಶ ಕತ್ತಿ

ಹುಕ್ಕೇರಿ: ಸಹಕಾರಿ ತತ್ವದಡಿ ವಿದ್ಯುತ್ ಪೂರೈಸುತ್ತಿರುವ ರಾಜ್ಯದ ಏಕೈಕ ಸಂಸ್ಥೆ ಎಂಬ ಹೆಮ್ಮೆಗೆ ಪಾತ್ರವಾಗಿರುವ ಹುಕ್ಕೇರಿ ಗ್ರಾಮೀಣ ವಿದ್ಯುತ್ ಸಹಕಾರಿ ಸಂಘದಿಂದ ಶೀಘ್ರ ವೈಯರ್ (ತಂತಿ) ಹಾಗೂ ವಿದ್ಯುತ್ ಪರಿವರ್ತಕ (ಟಿಸಿ) ಉತ್ಪಾದಿಸುವ ಘಟಕಗಳನ್ನು ಆರಂಭಿಸಲು ಚಿಂತನೆ ನಡೆಸಲಾಗಿದೆ ಎಂದು ಮಾಜಿ ಸಂಸದರೂ ಆದ ಡಿಸಿಸಿ ಬ್ಯಾಂಕ್ ಅಧ್ಯಕ್ಷ ರಮೇಶ ಕತ್ತಿ ಹೇಳಿದರು.

ತಾಲೂಕಿನ ಸುಲ್ತಾನಪುರದಲ್ಲಿ ಹೊಸದಾಗಿ ಸ್ಥಾಪಿಸಲಾದ 110/11 ಕೆವಿ ಉಪವಿದ್ಯುತ್ ವಿತರಣಾ ಕೇಂದ್ರವನ್ನು ಉದ್ಘಾಟಿಸಿ ಮಾತನಾಡಿದ ಅವರು, ಪ್ರತಿಷ್ಠಿತ ಈ ಸಂಸ್ಥೆಯಿಂದ ಬರುವ ದಿನಗಳಲ್ಲಿ ತಂತಿ ಮತ್ತು ಟಿಸಿ ತಯಾರಿಕೆ ಘಟಕಗಳನ್ನು ಆರಂಭಿಸಲು ಉದ್ದೇಶಿಸಲಾಗಿದೆ. ಇದರಿಂದ ಗ್ರಾಹಕರು ಮತ್ತು ರೈತರಿಗೆ ತ್ವರಿತ ಸೇವೆ ಮಾಡಲು ಅನುಕೂಲವಾಗಲಿದೆ ಎಂದರು.

ರಾಜ್ಯ ಸರಕಾರ ಗ್ಯಾರಂಟಿ ಯೋಜನೆಗಳ ಬದಲು ಜನರಿಗೆ ಬದುಕು ಕಟ್ಟಿಕೊಡುವ ಕಾರ್ಯಕ್ರಮಗಳನ್ನು ರೂಪಿಸಬೇಕು. ರೈತರು ಸ್ವಂತ ಹಣ ಭರಿಸಿ ಟಿಸಿ ಪಡೆದುಕೊಳ್ಳಬೇಕು ಎಂಬ ಅವೈಜ್ಞಾನಿಕ ಆದೇಶವನ್ನು ಪರಾಮರ್ಶಿಸಬೇಕು. ರೈತರಿಗೆ ಪ್ರತಿದಿನ 7 ಗಂಟೆ ಗುಣಮಟ್ಟದ ವಿದ್ಯುತ್ ಪೂರೈಸಲು



ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಅವರು ಹೇಳಿದರು.

ಸಂಸ್ಥೆ ವ್ಯಾಪ್ತಿಯ ತೋಟಪಟ್ಟಿಗಳಿಗೆ ನಿರಂತರ ವಿದ್ಯುತ್ ಪೂರೈಸಲು 44 ಕೋಟಿ ರೂ ಮೊತ್ತದ ಪ್ರಸ್ತಾವನೆ ಸಲ್ಲಿಸಲಾಗಿದೆ.

ಉತ್ತರ ಕರ್ನಾಟಕದ ಜಿಲ್ಲೆಗಳಿಗೆ ಇನ್ನು ಹೆಚ್ಚಿನ ವಿದ್ಯುತ್ ಪೂರೈಕೆಗೆ ಬೇಕಿರುವ 400 ಕೆವಿ ವಿದ್ಯುತ್ ವಿತರಣಾ ಕೇಂದ್ರ ಸ್ಥಾಪಿಸಲು ಸರ್ಕಾರ ಮುಂದಾದಲ್ಲಿ ತಾಲೂಕಿನ ನೇರ್ಲಿ ಬಳಿ 40 ಎಕರೆ ಜಮೀನು ಸೇರಿದಂತೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲಾಗುವುದು ಎಂದು ಅವರು ಹೇಳಿದರು.

12.28 ಕೋಟಿ ರೂ ವೆಚ್ಚದಲ್ಲಿ ನಿರ್ಮಿಸಿರುವ ಈ ಕೇಂದ್ರದಿಂದ ಸುಲ್ತಾನಪುರ ಸುತ್ತಲಿನ 8 ಹಳ್ಳಿಗಳಿಗೆ ಗುಣಮಟ್ಟದ ವಿದ್ಯುತ್ ದೊರಕಲಿದೆ. ನೀರಾವರಿಗೆ ಮತ್ತಷ್ಟು ಅನುಕೂಲವಾಗಲಿದೆ. ಜತೆಗೆ ಉದ್ಯೋಗ ಸೃಷ್ಟಿಯಾಗಲಿದೆ.

ಬರುವ ದಿನಗಳಲ್ಲಿ ಬೆಳವಿ, ನಿಡಸೋಸಿ, ಪಾಶ್ವಾಪೂರ ಹಾಗೂ ಶೇಕಿನ ಹೊಸುರದಲ್ಲಿ 110 ಕೆವಿ ವಿದ್ಯುತ್ ವಿತರಣಾ ಕೇಂದ್ರಗಳ ಸ್ಥಾಪಿಸುವ ಗುರಿ ಹೊಂದಲಾಗಿದೆ. ಸಹಕಾರಿ ಮಹರ್ಷಿ ದಿ.ಅಪ್ಪಣ್ಣಗೌಡ ಪಾಟೀಲ, ದಿ.ಉಮೇಶ ಕತ್ತಿ ಅವರ ಕಂಡ ಕನಸು ಇಂದು ನನಸಾಗಿದೆ ಎಂದು ಅವರು ಹೇಳಿದರು.

ಕೆಪಿಟಿಸಿಎಲ್ ಅಧೀಕ್ಷಕ ಅಭಿಯಂತರ ಶಿವಾಜಿ ಖರೆ, ಸಂಘದ ನಿರ್ದೇಶಕ ಅಶೋಕ ಚಂದಪ್ಪಗೋಳ ಮಾತನಾಡಿದರು. ಸಂಸ್ಥೆ ವ್ಯವಸ್ಥಾಪಕ ನಿರ್ದೇಶಕ ಕೆ.ಎಲ್.ಶ್ರೀನಿವಾಸ ಸ್ವಾಗತಿಸಿದರು. ಸ್ಥಾನಿಕ ಅಭಿಯಂತರ ನೇಮಿನಾಥ ಖೆಮಲಾಪೂರೆ ನಿರೂಪಿಸಿದರು.

ನಿರ್ದೇಶಕ ರವೀಂದ್ರ ಹಿಡಕಲ್ ವಂದಿಸಿದರು. ಇದೇ ವೇಳೆ ಕೇಂದ್ರ ನಿರ್ಮಾಣಕ್ಕೆ ಭೂದಾನ ಮಾಡಿದ ದಸ್ತಗೀರ ಮುಲ್ತಾನಿ ಅವರನ್ನು ಸನ್ಮಾನಿಸಲಾಯಿತು.

ಸಂಸ್ಥೆ ಅಧ್ಯಕ್ಷ ಕಲಗೌಡ ಪಾಟೀಲ, ಉಪಾಧ್ಯಕ್ಷ ವಿಷ್ಣು ರೇಡೇಕರ, ನಿರ್ದೇಶಕರಾದ ಕುನಾಲ ಪಾಟೀಲ, ಜೋಮಲಿಂಗ ಪಟೋಳಿ, ರವೀಂದ್ರ ಅಸೂದೆ, ಈರಪ್ಪಾ ಬಂಜಿರಾಮ, ಬಸಗೌಡ ಮಗೆಣ್ಣವರ, ಸೋಮಲಿಂಗ ಪಾಟೀಲ, ಸಂಗೀತಾ ದಪ್ಪಾದೂಳಿ, ಶಿವಲೀಲಾ ಮಣಗುತ್ತಿ, ಮ್ಯಾನೇಜರ ದುರದುಂಡಿ ನಾಯಿಕ, ಕೆಪಿಟಿಸಿಎಲ್ ಅಧಿಕಾರಿಗಳಾದ ಎಂ.ಪಿ.ಸುತಾರ, ಜೆ.ಡಿ.ಬಾಗವಾನ, ಚಂದ್ರಕಾಂತ ಜಾಡರ, ವಿಕ್ರಾಂತಗೌಡ ಪಾಟೀಲ, ಮುಖಂಡರಾದ ಶ್ರೀಶೈಲ ಮಗದುಮ್ಮ, ಬಸವರಾಜ ಮರಡಿ, ಸುರೇಶ ದೊಡ್ಡಲಿಂಗನವರ, ರಾಯಪ್ಪಾ ಡೂಗ, ಅಜ್ಜಪ್ಪಾ ಕಲ್ಲಟ್ಟಿ, ಗುರಪ್ಪಾ ತಳವಾರ, ಶ್ರೀಶೈಲ ಮಠಪತಿ, ಮಹಾದೇವ ಪಾಟೀಲ, ಬಸವರಾಜ ತಳವಾರ, ಶಿವನಪ್ಪ ಮದವಾಲ, ಬಾಳಪ್ಪಾ ಪಾಟೀಲ ಮತ್ತಿತರರು ಉಪಸ್ಥಿತರಿದ್ದರು.

# ಕಡಹಟ್ಟಿ ಜೈನ ಬಸದಿಗೆ 5 ಲಕ್ಷ ಸಹಾಯಧನ ವಿತರಣೆ



ಹುಕ್ಕೇರಿ: ತಾಲೂಕಿನ ಬೆಲ್ಲದ ಬಾಗೇವಾಡಿ ವಲಯದ ಕಡಹಟ್ಟಿ ಗ್ರಾಮದ 108 ಮಹಾವೀರ ಜೈನ ತೀರ್ಥಂಕರ ಬಸದಿ ಜೀರ್ಣೋದ್ಧಾರ ಕಾಮಗಾರಿಗೆ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಸಮುದಾಯ ಅಭಿವೃದ್ಧಿ ವಿಭಾಗದಿಂದ 5 ಲಕ್ಷ ರೂ ಸಹಾಯಧನ ವಿತರಿಸಲಾಯಿತು.

ಜಿಲ್ಲಾ ನಿರ್ದೇಶಕ ವಿಠ್ಠಲ ಸಾಲ್ಯಾನ್ ಮಾತನಾಡಿ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಹಲವಾರು ಸಾಮಾಜಿಕ, ಧಾರ್ಮಿಕ ಮತ್ತು ಶೈಕ್ಷಣಿಕ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ. ಅದರಂತೆ ಕಡಹಟ್ಟಿ ಜೈನ ಬಸದಿಯಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ವೀರೇಂದ್ರ ಹೆಗ್ಗಡೆ ಅವರು 5 ಲಕ್ಷ ರೂ ಸಹಾಯ ಒದಗಿಸಿದ್ದಾರೆ. ಈ ಅನುದಾನ ಸದ್ವಿನಿಯೋಗ ಮಾಡಿಕೊಳ್ಳಬೇಕು ಎಂದರು.

ತಾಲೂಕು ಯೋಜನಾಧಿಕಾರಿ ಅನಿತಾ ಬೆಳಗಾಂವಕರ, ಜೈನ ಬಸದಿ ಕಮಿಟಿ ಅಧ್ಯಕ್ಷ ಸಾತಪ್ಪ ಚೌಗಲಾ, ಶ್ರಾವಕ-ಶ್ರಾವಕಿಯರು ಮತ್ತಿತರರು ಉಪಸ್ಥಿತರಿದ್ದರು. ಭರತೇಶ ಶಿಕ್ಷಣ ಸಂಸ್ಥೆಯ ನೇಮಿನಾಥ ತೇರದಾಳ ಸ್ವಾಗತಿಸಿದರು. 5 ಲಕ್ಷ ರೂ, ಗಳ ಡಿಡಿ ಅನ್ನು ಬಸದಿಯ ಅಧ್ಯಕ್ಷ-ಕಾರ್ಯದರ್ಶಿಗೆ ಹಸ್ತಾಂತರಿಸಲಾಯಿತು.

# ಮೂವರು ಬ್ಯಾಂಕ್ ಮ್ಯಾನೇಜರ್ ಗಳು ಅರೆಸ್ಟ್

ಬೆಂಗಳೂರು: ನಕಲಿ ಭೂ ದಾಖಲೆಗಳನ್ನು ಹೊಂದಿದ್ದವರಿಗೆ ಸಾಲ ನೀಡಿದ್ದ ಮೂವರು ಬ್ಯಾಂಕ್ ಮ್ಯಾನೇಜರ್ ಗಳನ್ನು ಸಿಸಿಬಿ ಪೊಲೀಸರು ಬಂಧಿಸಿದ್ದಾರೆ. ಐಸಿಐಸಿಐ ಬ್ಯಾಂಕ್ ನ ಸೇಲ್ಸ್ ಮ್ಯಾನೇಜರ್ ರಾಕೇಶ್, ಸೆಂಟ್ ಮಾರ್ಕ್ಸ್ ರಸ್ತೆಯ ಎಸ್ ಬಿಐ ಬ್ಯಾಂಕ್ ಎಜಿಎಂ



ಮುರಳೀಧರ್, ಬೆಂಗಳೂರು ಜಿಲ್ಲಾ ಕೋ ಆಪರೇಟಿವ್ ಬ್ಯಾಂಕ್ ನ ಮಲ್ಲಿಕಾರ್ಜುನ ಬಂಧಿತ ಆರೋಪಿಗಳು. ದಾಖಲೆಗಳನ್ನು ಪರಿಶೀಲಿಸದೇ ನಕಲಿ ಭೂ ದಾಖಲೆ ಹೊಂದಿದ್ದವರಿಗೆ ಸಾಲ ನೀಡಿದ ಹಿನ್ನೆಲೆಯಲ್ಲಿ ಸುಮಾರು ನಾಲ್ಕುವರೆ ಕೋಟಿ ರೂಪಾಯಿ ಸಾಲ ಮರುಪಾವತಿಯಾಗಿಲ್ಲ. ಈ ಹಿನ್ನೆಲೆಯಲ್ಲಿ ಸಿಸಿಬಿ ಪೊಲೀಸರು ಮೂವರು ಬ್ಯಾಂಕ್ ಮ್ಯಾನೇಜರ್ ಗಳನ್ನು ಬಂಧಿಸಿದ್ದಾರೆ.

# ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಮೇಲ್ಮನವಿ ಪ್ರಾಧಿಕಾರ ಸಮಿತಿಗಳ ರಚನೆ: ಅರ್ಹರಿಂದ ಅರ್ಜಿ ಆಹ್ವಾನ

ಬೆಳಗಾವಿ: ಬೆಳಗಾವಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ದೀನ್‌ದಯಾಳ್ ಅಂತ್ಯೋದಯ ಯೋಜನೆ-ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನ (DAY-NULM) ದ ಕರ್ನಾಟಕ ಬೀದಿ ಬದಿ ವ್ಯಾಪಾರಿಗಳ (ಜೀವನೋಪಾಯ, ಸಂರಕ್ಷಣೆ ಮತ್ತು ನಿಯಂತ್ರಣ) ನಿಯಮ-2019 ರಂತೆ ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಮೇಲ್ಮನವಿ ಪ್ರಾಧಿಕಾರ ಸಮಿತಿಗಳ ರಚನೆಯಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಸದಸ್ಯರ ಹುದ್ದೆಯ ಹೆಸರು:

ಅಧ್ಯಕ್ಷ ಸ್ಥಾನಕ್ಕೆ ನಿವೃತ್ತ ಸಿವಿಲ್ ನ್ಯಾಯಾಧೀಶರಾಗಿರಬೇಕು. ಒಬ್ಬ ಸದಸ್ಯರು ಸ್ಥಾನಕ್ಕೆ ರಾಜ್ಯ ಸರ್ಕಾರದ ನಿವೃತ್ತ ಗ್ರೇಡ್ ಎ ಅಧಿಕಾರಿಯಾಗಿದ್ದು, ಸ್ಥಳಿಯ ಪ್ರದೇಶದಲ್ಲಿ ಉತ್ತಮ ಸೇವಾ ಅನುಭವ ಹೊಂದಿರಬೇಕು.

ಇನ್ನೊಬ್ಬ ಸದಸ್ಯರು ಹೆಸರಾಂತ ಸಮಾಜ ಸೇವಕರಾಗಿರಬೇಕು. ಸ್ಥಳೀಯ ಬೀದಿ ಬದಿಯ ವ್ಯಾಪಾರವನ್ನು ಒಳಗೊಂಡಿರುವ ಕುರಿತು ಅನುಭವ ಹೊಂದಿರಬೇಕು.

ಹೆಚ್ಚಿನ ಮಾಹಿತಿ ಹಾಗೂ ವಿವರಗಳನ್ನು www.belagavicity.mrc.gov.in ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಲಾಗಿದೆ. ಅದನ್ನು ತಿಳಿದುಕೊಂಡು ಪ್ರಕಟಣೆಯ ದಿನಾಂಕದಿಂದ 30 ದಿನಗಳಲ್ಲಿ ಅರ್ಜಿಗಳನ್ನು ಸಲ್ಲಿಸಬೇಕು ಎಂದು ಬೆಳಗಾವಿ ಮಹಾನಗರ ಪಾಲಿಕೆ ಆಯುಕ್ತರಾದ ಅಶೋಕ ದುಡಗುಂಟಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜ.22 ರಂದು ಅಯೋಧ್ಯೆಯಲ್ಲಿ ನೂತನ ಶ್ರೀ ರಾಮನ ವಿಗ್ರಹ ಪ್ರಾಣ ಪ್ರತಿಷ್ಠಾಪನೆ: ವಿಶೇಷ ಪೂಜೆ/ಪ್ರಾರ್ಥನೆ ಸಲ್ಲಿಸಲು ಸೂಚನೆ

ಬೆಳಗಾವಿ: ಶ್ರೀ ರಾಮನ ಜನ್ಮಸ್ಥಳವಾದ ಅಯೋಧ್ಯೆಯಲ್ಲಿ ಹೊಸದಾಗಿ ನಿರ್ಮಿಸಿರುವ ಶ್ರೀರಾಮ ಮಂದಿರದಲ್ಲಿ ಜ.22. 2024 ರಂದು ನೂತನವಾಗಿ ಶ್ರೀ ರಾಮನ ವಿಗ್ರಹದ ಪ್ರಾಣ ಪ್ರತಿಷ್ಠಾಪನಾ ಕಾರ್ಯಕ್ರಮವು ನಡೆಯಲಿದೆ. ಆದರಿಂದ ದೇಶದ/ರಾಜ್ಯದ ಎಲ್ಲಾ ಜನರ ಒಳಿತಿಗಾಗಿ, ಜಿಲ್ಲೆಯ ವ್ಯಾಪ್ತಿಯ ಧಾರ್ಮಿಕ ದತ್ತಿ ಇಲಾಖಾ ವ್ಯಾಪ್ತಿಗೆ ಒಳಪಡುವ ಎಲ್ಲಾ ಅಧಿಸೂಚಿತ ದೇವಾಲಯಗಳಲ್ಲಿ ಜ.22ರಂದು ಶ್ರೀರಾಮನ ವಿಗ್ರಹ ಪ್ರಾಣ ಪ್ರತಿಷ್ಠಾಪನಾ ಸಮಯದಲ್ಲಿ ಎಲ್ಲಾ ದೇವಾಲಯದಲ್ಲಿ ವಿಶೇಷ ಪೂಜೆ/ಪಾರ್ಥನೆ/ಮಂಗಳಾರತಿಯನ್ನು ಸಲ್ಲಿಸುವಂತೆ ಎಲ್ಲಾ ಧಾರ್ಮಿಕ ಸಂಸ್ಥೆಗಳ ಪದಾಧಿಕಾರಿಗಳಿಗೆ ಜಿಲ್ಲಾಧಿಕಾರಿ ನಿತೇಶ ಪಾಟೀಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೆಳಗಾವಿ-ಲಾತೂರ ಮಾರ್ಗದಲ್ಲಿ ಪಲ್ಲಕ್ಕಿ ನಾನ್ ಎ/ಸಿ ಸ್ಲೀಪರ್ ಹೊಸ ಬಸ್‌ಗಳ ಸೇವೆ ಪ್ರಾರಂಭ

ಬೆಳಗಾವಿ: ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಗೆ ಹೊಸ ವಿನ್ಯಾಸದೊಂದಿಗೆ ಅತ್ಯಾಧುನಿಕ ಸೌಲಭ್ಯಗಳುಳ್ಳ ನೂತನ ಪಲ್ಲಕ್ಕಿ ನಾನ್ ಎ/ಸಿ ಸ್ಲೀಪರ್ ಬಸ್ಸುಗಳು ಜ.19 ರಿಂದ ಪ್ರಾರಂಭಿಸಿದೆ.

ಜ.8 ರಂದು ಸಾರಿಗೆ ಸಚಿವರಿಂಧ ಸೇವೆ ಹುಬ್ಬಳ್ಳಿಯಲ್ಲಿ ಉಧ್ಘಾಟನೆಗೊಂಡಿರುತ್ತವೆ. ಸದರಿ ಬಸ್ಸುಗಳ ಪೈಕಿ 2 ಬಸ್ಸುಗಳು ಬೆಳಗಾವಿ ವಿಭಾಗಕ್ಕೆ ಲಭ್ಯವಾಗಿದ್ದು, ಜ.19 ರಂದು ಬೆಳಗಾವಿ-ಲಾತೂರ ಮಾರ್ಗದಲ್ಲಿ ಸಂಚಾರ ಪ್ರಾರಂಭಿಸಲಾಗಿದೆ.

ಮಾರ್ಗ: ಬೆಳಗಾವಿ-ಲಾತೂರ್ ವ್ಹಾಯ ಲೋಕಾಪೂರ, ಮುಧೋಳ, ಜಮಖಂಡಿ, ವಿಜಯಪುರ, ಸೋಲಾಪುರ, ತುಳಜಾಪೂರ ಮಾರ್ಗವಾಗಿ ಸಂಚರಿಸಲಿವೆ. ಪ್ರಯಾಣ ದರ ರೂ. 900 ಇರುತ್ತದೆ.

ವಿಶೇಷ ಸೌಲಭ್ಯಗಳು:

Fire Detection & Suppression System (ಬೆಂಕಿಪತ್ತೆ & ನಿಗ್ರಹ ವ್ಯವಸ್ಥೆಯನ್ನು) ಹೊಂದಿದೆ. Camera and Public Information System ಅಳವಡಿಸಲಾಗಿದೆ. ಸುಖಾಸೀನವಾದ 30 ಸ್ಲೀಪರ್ ಕೋಚ್ ಹಾಗೂ Back Rest Seat ವ್ಯವಸ್ಥೆ ಅಳವಡಿಸಲಾಗಿದೆ.

ಡಬಲ್ ಸೀಟರ್ ಬರ್ತನಲ್ಲಿ ಪ್ರಯಾಣಿಸಲು 2 ಸೀಟ್‌ಗಳ ಮಧ್ಯವಿಭಜಕ (Divider) ವ್ಯವಸ್ಥೆ ಇದೆ. ಮೊಬೈಲ ಸ್ಟಾಂಡ್ ಜೊತೆಗೆ ಮೊಬೈಲ್ ಮತ್ತು ಲ್ಯಾಪ್‌ಟಾಪ್ ಚಾರ್ಜಿಂಗ್ ಸೌಲಭ್ಯವಿದೆ. ಪ್ರತಿಯೊಬ್ಬ ಪ್ರಯಾಣಿಕರಿಗೆ ರೂ.10 ಲಕ್ಷಗಳ ಅಪಘಾತ ಪರಿಹಾರ ನಿಧಿ ಸೌಲಭ್ಯವಿದೆ.

ಇ-ಟಿಕೇಟನ್ನು ಆನ್ ಲೈನ್, www.ksrtc.in, www.nwkrtc.in ಹಾಗೂ ಮೊಬೈಲ್ ಮುಖಾಂತರ ಪಡೆಯಬಹುದಾಗಿದೆ. ಅಲ್ಲದೆ ಬೆಳಗಾವಿ ಬಸ್ ನಿಲ್ದಾಣದ ರಿಜರ್ವೇಷನ್ ಕೌಂಟರ್ ನಲ್ಲಿಯೂ ಸಹ ಮುಂಗಡ ಟಿಕೇಟ ಕಾಯ್ದಿರಿಸಿಕೊಳ್ಳಬಹುದಾಗಿದೆ.

4 ಜಿಲ್ಲೆ ಹಾಗೂ 4 ತಾಲೂಕ ಮಾರ್ಗವಾಗಿ ಈ ಪ್ರಪ್ರಥಮವಾಗಿ ಬೆಳಗಾವಿ-ಲಾತೂರ ಅಂತರಾಜ್ಯ ಮಾರ್ಗದಲ್ಲಿ ಪ್ರತಿಷ್ಠಿತ ಪಲ್ಲಕ್ಕಿ ನಾನ್ ಎಸಿ ಸ್ಲೀಪರ್ ಬಸ್ಸ ಕಾರ್ಯಾಚರಣೆಯನ್ನು ಪ್ರಾರಂಭಿಸಿದ್ದು, ಇರದ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಬೆಳಗಾವಿ ವಿಭಾಗದ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಜ್ಞಾನದ ಪ್ರಗತಿಯೇ ದೇಶದ ಪ್ರಗತಿ: ಎಸ್ ಹಿರಿಯಣ್ಣ

ಬೆಳಗಾವಿ: ವಿಜ್ಞಾನದ ಪ್ರಗತಿ ಹೆಚ್ಚಾದಂತೆ ದೇಶದ ಜನರ ಜೀವನದ ಗುಣಮಟ್ಟ ಸುಧಾರಿಸುತ್ತದೆ. ಪ್ರಸ್ತುತ ಭಾರತ ವಿಜ್ಞಾನ ಕ್ಷೇತ್ರದಲ್ಲಿ ಅಪ್ರತಿಮ ಸಾಧನೆ ಮಾಡುತ್ತಿದ್ದು, 2035ಕ್ಕೆ ಬಾಹ್ಯಾಕಾಶದಲ್ಲಿ ಭಾರತ ತನ್ನದೇ ಆದ ಸ್ಪೇಸ್ ಸ್ಟೇಷನ್ ಹೊಂದಲ್ಲಿದೆ.

ಅದಲ್ಲದೆ 2040ಕ್ಕೆ ಚಂದ್ರನ ಮೇಲೆ ಭಾರತೀಯರು ಕಾಲಿಡಲಿದ್ದಾರೆ ಎಂದು ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯ ಹಿರಿಯ ವಿಜ್ಞಾನಿ ಎಸ್ ಹಿರಿಯಣ್ಣ ಅಭಿಪ್ರಾಯಪಟ್ಟರು. ಅವರು ಇಂದು ನಗರದ ಶ್ರೀ ಸಿದ್ಧರಾಮೇಶ್ವರ ವಿಜ್ಞಾನ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ರಾಜ್ಯ ವಿಜ್ಞಾನ ಪರಿಷತ್ತು, ಬೆಳಗಾವಿ ವಿಜ್ಞಾನ ಕೇಂದ್ರ ಹಾಗೂ ಶಾಲಾ ಶಿಕ್ಷಣ ಇಲಾಖೆಯ ಸಹಯೋಗದಲ್ಲಿ ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ್ದ ಲಿಖಿತ




ರಸಪ್ರಶ್ನೆ ಸ್ಪರ್ಧೆ ಹಾಗೂ ವಿದ್ಯಾರ್ಥಿ ವಿಜ್ಞಾನಿ ನೇರ ಸಂವಾದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಮುಂದುವರೆದು ಮಾತನಾಡಿದ ಅವರು ಸರ್ಕಾರವೇ ವಿದ್ಯಾರ್ಥಿ-ವಿಜ್ಞಾನಿ ಸಂವಾದ ಕಾರ್ಯಕ್ರಮ ನಿಲ್ಲಿಸಿದ್ದರೂ ಸಹ ಡಾ. ಅಲ್ಲಮಪ್ರಭು ಮಹಾಸ್ವಾಮಿಗಳು ಜಿಲ್ಲೆಯ ವಿದ್ಯಾರ್ಥಿಗಳು ವೈಜ್ಞಾನಿಕ ಜ್ಞಾನದಿಂದ ವಂಚಿತರಾಗಬಾರದೆಂದು ಈ ಕಾರ್ಯಕ್ರಮ ಆಯೋಜಿಸಿರುವುದು ಅಭಿನಂದನೀಯ ಎಂದರು. ಸಮಾರಂಭದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಪಾಲ್ಗೊಂಡಿದ್ದ ಡಿ.ಆರ್. ಡಿ.ಒ. ಹಾಗೂ ಇಸ್ರೊ ನಿವೃತ್ತ ವಿಜ್ಞಾನಿ ಎನ್. ಎಸ್. ಕುಮಾರ್ ಮಾತನಾಡಿ ಪ್ರಸ್ತುತ ವಿಜ್ಞಾನ ಕ್ಷೇತ್ರದಲ್ಲಿ ವಿಪುಲ ಅವಕಾಶಗಳಿದ್ದು, ವಿದ್ಯಾರ್ಥಿಗಳು ಪಿ.ಯು ಹಾಗು ಪದವಿ ಹಂತದಲ್ಲಿ ಮೂಲ ವಿಜ್ಞಾನವನ್ನು ಆಯ್ಕೆ ಮಾಡಿಕೊಂಡು ಭವಿಷ್ಯದ ವಿಜ್ಞಾನಿಗಳಾಗಬೇಕು ಎಂದರು.

ಉದ್ಘಾಟನಾ ಸಮಾರಂಭದ ಸಾನಿಧ್ಯವಹಿಸಿ ಆಶೀರ್ವಚನ ನೀಡಿದ ನಾಗನೂರು ರುದ್ರಾಕ್ಷಿ ಮಠದ ಡಾ. ಅಲ್ಲಮಪ್ರಭು ಮಹಾಸ್ವಾಮೀಜಿ ಮಾತನಾಡಿ ವೈಜ್ಞಾನಿಕ ಮನೋಭಾವ ಬೆಳೆಸಿಕೊಂಡು ಸಮಾಜ ಕಟ್ಟುವ ಕೆಲಸದಲ್ಲಿ ಯುವ ಜನತೆ ತಮ್ಮನ್ನು ತೊಡಗಿಸಿಕೊಳ್ಳಬೇಕು. ಅತ್ಯಂತ ಕಡಿಮೆ ವೆಚ್ಚದಲ್ಲಿ ವಿಜ್ಞಾನದ ಗುಣಮಟ್ಟದ ಶಿಕ್ಷಣ ನೀಡುವ ದೃಷ್ಟಿಯಿಂದ ಸಿದ್ಧರಾಮೇಶ್ವರ ಇಂಟಿಗ್ರೇಟೆಡ್ ವಿಜ್ಞಾನ ಪದವಿ ಪೂರ್ವ ಮಹಾವಿದ್ಯಾಲಯ ನೂತನವಾಗಿ ಪ್ರಾರಂಭಿಸಿದ್ದು, ನಾಡಿನ ಜನತೆ ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಸಮಾರಂಭದ ಅಧ್ಯಕ್ಷತೆಯನ್ನು ಬೆಳಗಾವಿ ಅಸೋಸಿಯೇಷನ್ ಫಾರ್ ಸೈನ್ಸ್ ಎಜುಕೇಶನ್ ಕಾರ್ಯದರ್ಶಿ ಕೆ.ಬಿ. ಹಿರೇಮಠ ವಹಿಸಿದ್ದರು. ವೇದಿಕೆಯ ಮೇಲೆ ಪದವಿ ಪೂರ್ವ ಮಹಾವಿದ್ಯಾಲಯದ ಪ್ರಾಚಾರ್ಯ ಸಿದ್ದರಾಮ ರೆಡ್ಡಿ, ಉಪನ್ಯಾಸಕ ಪ್ರಭು ಶಿವನಾಯ್ಕ ಉಪಸ್ಥಿತರಿದ್ದರು. ಪ್ರಾರಂಭದಲ್ಲಿ ವಿಜ್ಞಾನ ಪದವಿ ಪೂರ್ವ ಮಹಾವಿದ್ಯಾಲಯದ ಪ್ರಾಚಾರ್ಯೆ ಸ್ವಪ್ನ ಜೋಷಿ ಸ್ವಾಗತಿಸಿದರು. ರಾಜಶೇಖರ್ ಪಾಟೀಲ ನಿರೂಪಿಸಿದರು.

ಉಪನ್ಯಾಸಕಿ ಪವಿತ್ರಾ ಪಾಟೀಲ ವಂದಿಸಿದರು. ಕಾರ್ಯಕ್ರಮದಲ್ಲಿ ಬೆಳಗಾವಿ ನಗರ ಹಾಗೂ ಗ್ರಾಮೀಣ ಪ್ರದೇಶದ 500 ವಿದ್ಯಾರ್ಥಿಗಳು ವಿಜ್ಞಾನಿಗಳೊಂದಿಗಿನ ಸಂವಾದದಲ್ಲಿ ಪಾಲ್ಗೊಂಡಿದ್ದರು.

# 'ಲೇಡಿಸ್ ಬಾರ್' ಚಲನಚಿತ್ರ ಶೀಘ್ರದಲ್ಲೇ ತೆರೆಗೆ



ಬೆಂಗಳೂರ : ಡಿಎಂಸಿ ಪ್ರೊಡಕ್ಷನ್ ಲಾಂಛನದಲ್ಲಿ ಟಿ ಎಮ್ ಸೋಮರಾಜು ರವರ ನಿರ್ಮಾಣದ 'ಲೇಡಿಸ್ ಬಾರ್' ಹೀಗೊಂದು ಸಿನಿಮಾ ಸಿದ್ಧವಾಗಿದ್ದು, ಶೀಘ್ರದಲ್ಲೇ ತೆರೆಗೆ ಬರಲಿದೆ.

ಇತ್ತೀಚಿಗೆ ಯೂಟ್ಯೂಬ್ ಸಿರಿ ಮ್ಯೂಸಿಕ್ ಚಾನೆಲ್ ನಲ್ಲಿ ಟೀಸರ್ ಹಾಗೂ ಹಾಡುಗಳು ಬಿಡುಗಡೆಯಾಗಿದ್ದು ಎಲ್ಲರ ನಿದ್ದೆಗೆಡಿಸಿ ಸದ್ದು ಮಾಡುತ್ತಿವೆ. 'ಲೇಡೀಸ್ ಬಾರ್' ಶೀರ್ಷಿಕೆ ಕೇಳಿದಾಕ್ಷಣ , ಇದು ಕುಡಿತದ ಸಿನಿಮಾ ಅಂದುಕೊಳ್ಳುವುದು ಸಹಜ, ಆದರೆ ಈ ಚಿತ್ರದಲ್ಲಿ, ಬರಿ ಕುಡಿಯೋದನ್ನೇ ತೋರಿಸಿಲ್ಲ, ಅದರಿಂದ ಜೀವನದ ಮೇಲೆ ಆಗುತ್ತಿರುವ ಪರಿಣಾಮಗಳ ಬಗ್ಗೆಯೂ ಸಮಾಜಕ್ಕೆ ಉತ್ತಮ ಸಂದೇಶವನ್ನು ಹೇಳುವ ಪ್ರಯತ್ನವನ್ನು ಮಾಡಲಾಗಿದೆ.

ನಿರ್ದೇಶಕ ಎ ಎನ್ ಮುತ್ತು ಅವರು ಹೇಳಿದ ಕಥೆ ನನಗೆ ತುಂಬಾ ಇಷ್ಟವಾಯಿತು . ಸಮಾಜಕ್ಕೆ ಒಂದೊಳ್ಳೆ ಸಂದೇಶ ಇರುವ ಚಿತ್ರವಾಗಿರುವುದರಿಂದ ಚಿತ್ರಕ್ಕೆ ಬಂಡವಾಳ ಹೂಡಿದ್ದೇನೆ ಹಾಗೂ ಒಂದು ಪ್ರಮುಖ ಪಾತ್ರದಲ್ಲಿ ನಟನೆ ಕೂಡ ಮಾಡಿದ್ದೇನೆಂದು ನಿರ್ಮಾಪಕ ಸೋಮರಾಜ್ ಹೇಳಿದರು.

ಛಾಯಾಗ್ರಹಣ ವಿನಸ್ ಮೂರ್ತಿ, ಹರ್ಷ ಕೋಗೋಡ್‌ರವರ ಸಂಗೀತ, ಮನ್ವರ್ಷಿ ನವಲಗುಂದ, ಶ್ರೀ ತೇಜ್. ರಾಜು ಚಿತ್ರಪುರ ಅವರ ಸಾಹಿತ್ಯವಿದ್ದು ಚಿತ್ರದಲ್ಲಿ ಒಟ್ಟು ನಾಲ್ಕು ಹಾಡುಗಳಿವೆ. ನೃತ್ಯ ನಿರ್ದೇಶಕ ಜಗ್ಗು, ಸಂಕಲನ ಶಿವರಾಜ್ ಮೇವು, ಸಾಹಸ ನಿರ್ದೇಶನ ಚಂದ್ರು ಬಂಡೆ ಅವರದಿದೆ.

ಚಿತ್ರದಲ್ಲಿ ಕಲಾವಿದರಾದ ಹರೀಶ್ ರಾಜ್, ಕೆಂಪೇಗೌಡ, ಚಿಲ್ಲರ್ ಮಂಜು, ಸೀತಾರಾಮ್, ಕುರಿರಂಗ, ಚೈತ್ರ ಗೌಡ, ಶಿವಾನಿ ಗೌಡ, ಗಣೇಶ್ ರಾವ್ ಕೇಸರಕರ್ ಮುಂತಾದವರು ಮನೋಜ್ಞವಾಗಿ ಅಭಿನಯಿಸಿದ್ದಾರೆ. ಪಿಆರ್ ಓ ಸುಧೀಂದ್ರ ವೆಂಕಟೇಶ್ ,ಡಾ.ಪ್ರಭು ಗಂಜಿಹಾಳ, ಡಾ.ವೀರೇಶ ಹಂಡಗಿ ಚಿತ್ರಕ್ಕೆ ಎಸ್ ಎನ್ ರಾಜಶೇಖರ್ ಸಹ ನಿರ್ಮಾಪಕರಾಗಿದ್ದಾರೆ.ಎ ಎನ್ ಮುತ್ತು ರವರು ಕಥೆ ಚಿತ್ರಕಥೆ ಸಂಭಾಷಣೆ ಬರೆದು ನಿರ್ದೇಶನದಲ್ಲಿ ತೆರೆಗೆ ಬರುವ ಈ ಚಿತ್ರದ ನಿರ್ದೇಶಕರು ಬಾಗಲಕೋಟ ಜಿಲ್ಲೆಯವರೆಂಬುದು ವಿಶೇಷವಾಗಿದೆ.

# ಚಕ್ರದಡಿ ಸಿಲುಕಿ ಚಾಲಕ ಕಂ ನಿರ್ವಾಹಕ ಸಾವು

ಬಾಗಲಕೋಟೆ: ಬಸ್ ಹತ್ತುವ ಭರದಲ್ಲಿ ನೂಕು ನುಗ್ಗಲು ಸಂಭವಿಸಿ ಬಸ್ ಚಕ್ರದಡಿ ಸಿಲುಕಿ ಚಾಲಕ ಕಂ ನಿರ್ವಾಹಕ ಸಾವನ್ನಪ್ಪಿದ ಘಟನೆ ಬಾಗಲಕೋಟೆಯ ನವನಗರದ ಬಸ್ ನಿಲ್ದಾಣದಲ್ಲಿ ನಡೆದಿದೆ.



ಗದ್ಯಪ್ಪ ಗಡ್ಡಿ (50) ಮೃತ ವ್ಯಕ್ತಿ ಎಂದು ಗುರುತಿಸಲಾಗಿದೆ. ಗದ್ಯಪ್ಪ ಗಡ್ಡಿ ಕೌಜಗನೂರು ಗ್ರಾಮದ ನಿವಾಸಿಯಾಗಿದ್ದು, ಬಾಗಲಕೋಟೆ ಜಿಲ್ಲೆ ಹುನಗುಂದ ತಾಲ್ಲೂಕಿನ ಗ್ರಾಮದರಾಗಿದ್ದಾರೆ. ಚಿಕ್ಕಮಗಳೂರು ಜಿಲ್ಲೆಯ ಕಡೂರು ಕೆ ಎಸ್ ಆರ್ ಟಿ ಸಿ ಡಿಪೊದಲ್ಲಿ ಕೆಲಸ ಮಾಡುತ್ತಿದ್ದರು. ಆದರೆ ಬಾಗಲಕೋಟೆಯಿಂದ ಇಳಕಲ್ ಕಡೆ ಹೊರಟಿದ್ದ ಕೆ ಎಸ್ ಆರ್ ಟಿ ಸಿ ಬಸ್ ಏರುವ ಸಮಯದಲ್ಲಿ ನೂಕು ನುಗ್ಗಲಾಗಿ ಬಸ್ ಚಕ್ರದಡಿ ಸಿಲುಕಿ ಗದ್ಯಪ್ಪ ಗಡ್ಡಿ ಸಾವನ್ನಪ್ಪಿದ್ದಾರೆ.

ಸ್ಥಳಕ್ಕೆ ಬಾಗಲಕೋಟೆ ಸಂಚಾರಿ ಠಾಣಾ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಸಂಚಾರಿ ಠಾಣೆಯಲ್ಲಿ ದೂರು ದಾಖಲಾಗಿದೆ.

# 20 ಕೆಜಿ ತೂಕ ಇಳಿಸಿಕೊಂಡ ಬಾಲಿವುಡ್ ಬ್ಯೂಟಿ ಸೋನಂ

ಮುಂಬೈ: ಬಾಲಿವುಡ್ ನಟಿ ಸೋನಂ ಕಪೂರ್ ಅಚ್ಚರಿಯ ಸಂಗತಿಯೊಂದನ್ನು ಬಹಿರಂಗ ಗೊಳಿಸಿದ್ದಾರೆ.

ತಾಯಿಯಾದ ನಂತರ ಅವರ ತೂಕ ಹೆಚ್ಚಾಗಿತ್ತು. ಈಗ 20 ಕೆಜಿ ತೂಕವನ್ನು ಇಳಿಸಿಕೊಂಡಿರುವುದಾಗಿ ಸ್ವತಃ ಸೋನಮ್ ಕಪೂರ್ ಹೇಳಿಕೊಂಡಿದ್ದಾರೆ.

ಈ ಮೂಲಕ ಮತ್ತೆ ಸಿನಿಮಾ ರಂಗದಲ್ಲಿ ಸಕ್ರಿಯರಾಗಿರುವ ಕುರಿತು ಸುಳಿವು ನೀಡಿದ್ದಾರೆ.

2018ರಲ್ಲಿ ಉದ್ಯಮಿ ಆನಂದ್ ಅಹುಜಾ ಜೊತೆ ಮದುವೆಯಾಗಿದ್ದ



ಸೋನಂ ಕಪೂರ್ಗೆ ವಾಯು ಎನ್ನುವ ಮಗನಿದ್ದಾನೆ. 2022ರಲ್ಲಿ ವಾಯು ಎಂಬ ಪುತ್ರನಿಗೆ ಜನ್ಮ ನೀಡಿದ್ದಾರೆ.

20 ಕೆಜಿ ಇಳಿದಿದ್ದೀನಿ, ಇನ್ನೂ 6 ಕೆಜಿ ಇಳಿಸಬೇಕಿದೆ.

ಇದಕ್ಕಾಗಿ ನಾನು ಬರೋಬ್ಬರಿ 16 ತಿಂಗಳ ಕಾಲ ತೆಗೆದುಕೊಂಡೆ. ಯಾವುದೇ ಕ್ರ್ಯಾಶ್ ಡಯಟ್ ಮಾಡಲಿಲ್ಲ. ಮಗುವಿನ ಆರೈಕೆ, ಕಾಳಜಿಗಾಗಿ ನಾನೂ ಕೂಡ ಜಾಗೃತೆ ವಹಿಸೋದು ಮುಖ್ಯವಾಗಿತ್ತು. ಇದೀಗ ನನ್ನ ಶ್ರಮ ಫಲಿಸಿದೆ. ನಾನು ಅಂದುಕೊಂಡಿದ್ದೂ ಇನ್ನೂ ಮುಗಿದಿಲ್ಲ. ಆದರೆ ನನ್ನ ದೇಹಕ್ಕೆ ನಾನು ಕೃತಜ್ಞತೆ ಸಲ್ಲಿಸುತ್ತೇನೆ ಎಂದು ಸೋನಂ ಕಪೂರ್ ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ.

# ಕಿತ್ತೂರು ತಾಲೂಕಿನ ಹೆಸರು ಬದಲಾವಣೆ; ಸಚಿವ ಸಂಪುಟ ಸಭೆಯಲ್ಲಿ ನಿರ್ಣಯ

ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಗುರುವಾರ ಸಚಿವ ಸಂಪುಟ ಸಭೆ ನಡೆದಿದ್ದು, ಪ್ರಮುಖ ನಿರ್ಣಯಗಳಿಗೆ ಸಚಿವ ಸಂಪುಟವು ತನ್ನ ಒಪ್ಪಿಗೆ ನೀಡಿದೆ.

ಪ್ರಮುಖ ನಿರ್ಣಯಗಳು: ಬೆಳಗಾವಿ ಜಿಲ್ಲೆಯ ಕಿತ್ತೂರು ತಾಲ್ಲೂಕನ್ನು 'ಚನ್ನಮ್ಮನ ಕಿತ್ತೂರು ತಾಲ್ಲೂಕು' ಎಂದು ಮರುನಾಮಕರಣ ಮಾಡಲು ಸಚಿವ ಸಂಪುಟ ಒಪ್ಪಿದೆ.


ಗೃಹ ಜ್ಯೋತಿ ಯೋಜನೆಯ ಅನುಷ್ಠಾನ ಕುರಿತು ದಿನಾಂಕ 5.6.2023 ರಂದು ಹೊರಡಿಸಿರುವ ಸರ್ಕಾರಿ ಆದೇಶವನ್ನು ಮಾರ್ಪಡಿಸಿ ಮಾಸಿಕ 48 ಯೂನಿಟ್ ಗಳಿಗಿಂತ ಕಡಿಮೆ ಬಳಸುವ ಐಖಿ 2 ಗ್ರಾಹಕರಿಗೆ ಹೆಚ್ಚುವರಿ 10 % ಬದಲಿಗೆ ಹೆಚ್ಚುವರಿ 10 ಯೂನಿಟ್ ಅರ್ಹತಾ ಯೂನಿಟ್ ಗಳನ್ನು ಒದಗಿಸಲು ಸಚಿವ ಸಂಪುಟ ನಿರ್ಧರಿಸಿದೆ.

ಜಗಜ್ಯೋತಿ ಬಸವಣ್ಣನವರನ್ನು ಕರ್ನಾಟಕದ ಸಾಂಸ್ಕೃತಿಕ ನಾಯಕರನ್ನಾಗಿ ಘೋಷಿಸಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ.

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ಷೇರು ಬಂಡವಾಳವನ್ನು ರೂ.600 ಕೋಟಿ ರೂ.ಗಳಿಂದ 1200 ಕೋಟಿ ರೂ.ಗಳಿಗೆ ಹೆಚ್ಚಿಸಲು ಸಚಿವ ಸಂಪುಟ ಅನುಮೋದಿಸಿದೆ.

ಉಡುಪಿ ನ್ಯಾಯಾಲಯದ ಆವರಣದಲ್ಲಿ ವಕೀಲರ ಭವನ ಮತ್ತು ಎ.ಡಿ.ಆರ್ ಸಂಕೀರ್ಣ ವನ್ನೊಳಗೊಂಡ ಅನೆಕ್ಸ್ ನ್ಯಾಯಾಲಯದ ಕಟ್ಟಡ ನಿರ್ಮಾಣ ಕಾಮಗಾರಿ ( ಪ್ರಥಮ ಹಂತ) ರೂ.15.14 ಕೋಟಿಗಳ ಅಂದಾಜುಪಟ್ಟಿಗೆ ನ್ಯಾಯಾಲಯ ಕಟ್ಟಡಗಳ ನಿರ್ಮಾಣಕ್ಕೆ ಸಚಿವ ಸಂಪುಟದ ಒಪ್ಪಿಗೆ

ವಿಜಯನಗರ ಜಿಲ್ಲೆ ಬಸವನಬಾಗೇವಾಡಿ ತಾಲ್ಲೂಕಿನ ನಂದಿಹಾಳ ಪಿ.ಹೆಚ್ ಗ್ರಾಮದ ಹೆಸರನ್ನು *ಆರೂಢ ನಂದಿಹಾಳ* ಎಂದು




ಮರುನಾಮಕರಣ ಮಾಡಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ

ಚಿಕ್ಕಮಗಳೂರು ಜಿಲ್ಲೆಯ ಐ.ಡಿ.ಪೀಠದ ಶ್ರೀ ಗುರುದತ್ತಾತ್ರೇಯ ಬಾಬಾ ಬುಡನ್ ಸ್ವಾಮಿ ದರ್ಗಾ ಅಧಿಸೂಚಿತ ಸಂಸ್ಥೆಗೆ ಶ್ರೀ ಸೈಯದ್ಘೌಸ್ ಮೊಹಿಯುದ್ದೀನ್ ಶಾಖಾದ್ರಿ ಇವರು ಸರ್ವೋಚ್ಚ ನ್ಯಾಯಾಲಯದಲ್ಲಿ ದಾಖಲಾಗಿರುವ ಎಸ್ ಎಲ್ ಪಿ ಪ್ರಕರಣದಲ್ಲಿ ಸರ್ಕಾರದ ನಿಲುವನ್ನು ವ್ಯಕ್ತಪಡಿಸಲು, ಪ್ರಕರಣದ ಸಮಗ್ರ ಪರಿಶೀಲನೆ ನಡೆಸಿ ಶಿಫಾರಸ್ಸು ನೀಡಲು ಸಚಿವ ಸಂಪುಟ ಉಪಸಮಿತಿಯನ್ನು ರಚಿಸಲಾಗಿದೆ.

ಸಮಿತಿಯ ಅಧ್ಯಕ್ಷರಾಗಿ ಗೃಹ ಸಚಿವರು, ಸದಸ್ಯರಾಗಿ ಕಾನೂನು ಸಚಿವರು, ಸಾರಿಗೆ ಸಚಿವರು , ಕಂದಾಯ ಸಚಿವರು ಹಾಗೂ ಚಿಕ್ಕಮಗಳೂರು ಜಿಲ್ಲಾ ಉಸ್ತುವಾರಿ ಸಚಿವರನ್ನು ನೇಮಿಸುವ ನಿರ್ಣಯ ಕೈಗೊಳ್ಳಲಾಗಿದೆ.

ಶಿವಮೊಗ್ಗ ನಗರದ ಹಳೆಜೈಲು ಆವರಣದ ಸ.ನಂ.75ರಲ್ಲಿನ ಒಟ್ಟು 46.32 ಎಕರೆ ಸಾರ್ವನಿಕ ಉದ್ದೇಶಕ್ಕೆ ಕಾಯ್ದಿರಿಸಿದ ಪ್ರದೇಶವನ್ನು 'ಅಲ್ಲಮ ಪ್ರಭು ಉದ್ಯಾನವನ' ಎಂದು ನಾಮಕರಣ ಮಾಡಲು ನಿರ್ಣಯ ಕೈಗೊಳ್ಳಲಾಗಿದೆ.

ಜಲಜೀವನ್ ಮಿಷನ್ ಯೋಜನೆಯಡಿ ಮೈಸೂರು ಜಿಲ್ಲೆಯ ಹೆಚ್.ಡಿ.ಕೋಟೆಯ ಅಂತರಸಂತೆ, ಹಂಪಾಪುರ ಮತ್ತು ವಿವಿಧ ಜನವಸತಿ ಪ್ರದೇಶಗಳಿಗೆ ಹಾಗೂ ಟಿ.ನರಸೀಪುರ ತಾಲ್ಲೂಕಿನ ದೊಡ್ಡಬಾಗಿಲು, ಹಾವೇರಿ ತಾಲ್ಲೂಕಿನ ನೆಗಳೂರು, ಹಾನಗಲ್ ತಾಲ್ಲೂಕಿನ ಕುಡ್ಲ ಮತ್ತಿತರ ಜನವಸತಿ ಹಾಗೂ ಗ್ರಾಮಗಳಿಗೆ ಬಹುಗ್ರಾಮ ಕುಡಿಯುವ ನೀರು ಯೋಜನೆಯ ಪುನಶ್ಚೇತನ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಯಿತು.

ಪರಿಶಿಷ್ಟ ಜಾತಿಗಳ ವರ್ಗೀಕರಣ (ಒಳ ಮೀಸಲಾತಿ) ಗೆ ಸಂಬಂಧಿಸಿದಂತೆ ಭೋವಿ, ಬಂಜಾರ, ಕೊರಮ ಮತ್ತು ಕೊರಚ ಜಾತಿಗಳು ಹಾಗೂ ಅದರ ಪರ್ಯಾಯ ಜಾತಿಗಳು ಪರಿಶಿಷ್ಟ ಜಾತಿಯ ಪಟ್ಟಿಯಲ್ಲಿದ್ದು, ಅದನ್ನು ಹಾಗೆಯೇ ಉಳಿಸಿಕೊಳ್ಳುವಂತೆ ಹಾಗೂ ಕರ್ನಾಟಕ ರಾಜ್ಯಕ್ಕೆ ಸೇರಿದ ಪರಿಶಿಷ್ಟ ಜಾತಿಗಳ ಪಟ್ಟಿಯಲ್ಲಿ ಅವುಗಳನ್ನು ಮುಂದುವರೆಸುವಂತೆ ಭಾರತ ಸರ್ಕಾರಕ್ಕೆ ಶಿಫಾರಸ್ಸು ಮಾಡಲು ಸಚಿವ ಸಂಪುಟದಲ್ಲಿ ಅನುಮೋದನೆ.



BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089